MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 118 | ಮಂಗಳವಾರ : 24-02-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 118 | TUESDAY : 24-02-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ನಿವೃತ್ತ ಸೈನಿಕರಿಗೆ ಸರ್ಕಾರಿ ಭೂಮಿ ಮಂಜೂರಿಗೆ ಡಿಎಸ್‌ಎಸ್ ಒತ್ತಾಯ



ಯುವಮಾರ್ಗ ಸುದ್ದಿ

**ಮಸ್ಕಿ,ಫೆ,23–** ತಾಲೂಕಿನಲ್ಲಿರುವ ನಿವೃತ್ತ ಸೈನಿಕರಿಗೆ ಮತ್ತು ಮೃತ ಸೈನಿಕರ ಕುಟುಂಬಸ್ಥರಿಗೆ ಸರ್ಕಾರಿ ಭೂಮಿ ಮಂಜೂರು ಮಾಡಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಮಸ್ಕಿ ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ ಸೋಮವಾರ ಒತ್ತಾಯಿಸಿದರು.

ನಂತರ ದಲಿತ ಸಂಘರ್ಷ ಸಮಿತಿ ಮಸ್ಕಿ ನಗರ ಘಟಕ ಅಧ್ಯಕ್ಷ ಮಲ್ಲಿಕ್ ಮುರಾರಿ ಮಾತನಾಡಿ, ನಿವೃತ್ತ ಹಾಗೂ ಮೃತ ಮಾಜಿ ಸೈನಿಕರ ಕುಟುಂಬಸ್ಥರಿಗೆ ಸರಕಾರದಿಂದ ಜಮೀನನ್ನು ನೀಡುವಂತೆ ಅರ್ಜಿ ಸಲ್ಲಿಸಿದರೂ ಸಂಬಂಧಪಟ್ಟ ಅಧಿಕಾರಿಗಳು ಭೂಮಿ ಮಂಜೂರು ಮಾಡದೇ ನಿರ್ಲಕ್ಷ ವಹಿಸುತ್ತಿದ್ದಾರೆಂದು ಆರೋಪಿಸಿದರು.

ನಿವೃತ್ತಿ ಹೊಂದಿ ತಮಗೆ ಸಿಗಬೇಕಾದ ಸರಕಾರಿ ಸೌಲಭ್ಯಗಳನ್ನು ಪಡೆದುಕೊಳ್ಳಲು ದಿನ ನಿತ್ಯ ಸರ್ಕಾರಿ ಕಛೇರಿಗಳಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಜಿಲ್ಲೆಯಲ್ಲಿ ಜಮೀನು ಮಂಜೂರಿಗಾಗಿ ಒಟ್ಟು 105 ಜನ ನಿವೃತ್ತ ಸೈನಿಕರು ಅರ್ಜಿ ಸಲ್ಲಿಸಿದ್ದಾರೆ. ಅದರಲ್ಲಿ ಮಸ್ಕಿ ತಾಲೂಕಿನಿಂದ 07 ಅರ್ಜಿಗಳು ಸಲ್ಲಿಕೆಯಾಗಿ ಸುಮಾರು ವರ್ಷಗಳಾದರೂ ಅವರಿಗೆ ಜಮೀನು ಮಂಜೂರು ಮಾಡದೆ ಅಧಿಕಾರಿಗಳ ಬೇಜವಾಬ್ದಾರಿ, ನಿಷ್ಕಾಳಜಿತನ ಎದ್ದು ಕಾಣಿಸುತ್ತದೆ. ತಾಲೂಕಿನಲ್ಲಿ ಸರ್ಕಾರಿ ಜಮೀನುಗಳಿದ್ದು, ತಾಲೂಕಿನ ಗುಡದೂರ ಹೋಬಳಿಯ ಮೇರನಾಳ ಗ್ರಾಮದ ಸರ್ವೆ ನಂ.66/1 36 ಎಕರೆ 01 ಗುಂಟೆ ಸರಕಾರಿ ಗಾಯರಾಣ ಜಮೀನಿದ್ದು, ತಾಲೂಕಿನ 07 ಜನ ನಿವೃತ್ತ ಸೈನಿಕರಿಗೆ ಕೂಡಲೇ ಸರ್ಕಾರಿ ಭೂಮಿ ಮಂಜೂರು ಮಾಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಈರಪ್ಪ ಕುಣೆಕೆಲ್ಲೂರು, ಮರಿಸ್ವಾಮಿ ಹಸಮಕಲ್, ರಾಜು ಗುಡದೂರು, ಮರಿಸ್ವಾಮಿ, ಪ್ರದೀಪ, ಅಜಯ, ಪ್ರಮೋದ, ಸುರೇಶ ಗುಡದೂರು, ಬಸವರಾಜ, ಶೇಖರ, ಬಸವಲಿಂಗಪ್ಪ, ದೇವರಾಜ ಇದ್ದರು.

## ಹೋಳಿ, ರಂಜಾನ್ ಹಬ್ಬದ ವೇಳೆ ಶಾಂತಿ ಕದಡಿದರೆ ಕಠಿಣ ಕ್ರಮ : ಪರಮೇಶ್ವರ್ ಎಚ್ಚರಿಕೆ

**ಬೆಂಗಳೂರು, ಫೆ.23–** ರಂಜಾನ್ ಮತ್ತು ಹೋಳಿ ಹಬ್ಬಗಳ ಆಚರಣೆಯ ವೇಳೆ ಕಾನೂನು ಕೈಗೆತ್ತಿಕೊಂಡು ಶಾಂತಿ ಕದಡಲು ಯಾರಿಗೂ ಅವಕಾಶ ನೀಡುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಎಚ್ಚರಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಹಬ್ಬ ಇರುವುದು ಸಂತೋಷದಿಂದ ಆಚರಣೆ ಮಾಡಲು. ಅಂತಹ ಸಂದರ್ಭಗಳಲ್ಲಿ ಶಾಂತಿ ಭಂಗಕ್ಕೆ ಪ್ರಯತ್ನಿಸಿದರೆ. ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂದರು. ಬಾಂಗ್ಲಾದಿಂದ ಬಂದಿರುವ ಅಕ್ರಮ ವಾಸಿಗಳ ವಿರುದ್ಧ ಒಂದು ತಿಂಗಳಿನಿಂದಲೂ ತಪಾಸಣಾ ಕಾರ್ಯ ಕೈಗೊಳ್ಳಲಾಗಿದೆ.

ಈ ಬಗ್ಗೆ ವಿರೋಧ ಪಕ್ಷಗಳ ಮುಖಂಡರು ಕೂಡ ಟೀಕೆ ಮಾಡಿದ್ದರು. ಕಾಫಿ ತೋಟಗಳಲ್ಲಿ, ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದಿದ್ದರು. ಈ ಹಿನ್ನೆಲೆಯಲ್ಲಿ ಜಿಲ್ಲಾ ಕೇಂದ್ರಗಳ ಎಸ್ಪಿಗಳಿಗೆ, ಬೆಂಗಳೂರಿನಲ್ಲಿ ಡಿಎಸ್‌ಪಿಗಳಿಗೆ ಕಠಿಣ ಸಂದೇಶ ರವಾನಿಸಿ, ಅಭಿಯಾನದ ಮಾದರಿಯಲ್ಲಿ ತಪಾಸಣೆ ನಡೆಸುತ್ತಿದ್ದೇವೆ ಎಂದರು.ಕೊರಟಗೆರೆಯಲ್ಲಿ ದಲಿತ ಕುಟುಂಬವನ್ನು ದೇವಸ್ಥಾನದ ಒಳಗೆ ಬಿಡದೆ ಅಪಮಾನ ಮಾಡಲಾಗಿದೆ ಎಂಬ ಬಗ್ಗೆ ಪರಿಶೀಲಿಸುವುದಾಗಿ ಹೇಳಿದರು.ಕಾಂಗ್ರೆಸ್ಸಿನಲ್ಲಿ ನಾಯಕತ್ವದ ವಿಚಾರವಾಗಿ ಯಾವುದೇ ಗೊಂದಲ ಇಲ್ಲ. ಎಲ್ಲವೂ ವಿರೋಧ ಪಕ್ಷದವರ ಸೃಷ್ಟಿ.ರಾಜ್ಯದಲ್ಲಿ ಆಡಳಿತ ಸುಗಮವಾಗಿ ನಡೆಯುತ್ತಿದೆ. ಸಿದ್ದರಾಮಯ್ಯ ಅವರು ಬಜೆಟ್ ಪೂರ್ವ ತಯಾರಿಕೆಗೆ ಒಂದು ತಿಂಗಳಿನಿಂದಲೂ ನಿರಂತರವಾಗಿ ಸಭೆ ನಡೆಸಿ ಚರ್ಚಿಸುತ್ತಿದ್ದಾರೆ. ನಮ್ಮಲ್ಲಿ ಯಾವುದೇ ಗೊಂದಲಗಳಿಲ್ಲ . ವಿರೋಧ ಪಕ್ಷಗಳು ತಮ ಲೋಪಗಳನ್ನು ಮುಚ್ಚಿಟ್ಟುಕೊಳ್ಳಲು ಮುಖ್ಯಮಂತ್ರಿ ಬದಲಾವಣೆ ಎಂಬ ಅನಗತ್ಯ ಗೊಂದಲವನ್ನು ಹುಟ್ಟು ಹಾಕಿದ್ದಾರೆ ಎಂದರು.ಕಾಂಗ್ರೆಸ್ ಹೊರತುಪಡಿಸಿ ಬೇರೆ ಯಾವ ಪಕ್ಷದಲ್ಲೂ ದಲಿತರನ್ನು ಮುಖ್ಯಮಂತ್ರಿ ಮಾಡಲು ಸಾಧ್ಯವಿಲ್ಲ. ದಲಿತರಿಗೆ ಯಾವಾಗ ಅವಕಾಶ ಸಿಗುತ್ತದೆ ಎಂಬುದನ್ನು ಹೈಕಮಾಂಡ್ ನಾಯಕರು ನಿರ್ಧರಿಸುತ್ತಾರೆ ಎಂದರು.ಭ್ರಷ್ಟಾಚಾರದ ಬಗ್ಗೆ ಬಿಜೆಪಿಯವರು ಬಹಳ ಪಾಠ ಮಾಡುತ್ತಾರೆ. ಆದರೆ ಶಿರಹಟ್ಟಿ ಕ್ಷೇತ್ರದ ಶಾಸಕರ ಚಂದ್ರು ಲಮಾಣಿ ಬಂಧನದ ಬಗ್ಗೆ ಏಕೆ ಪ್ರತಿಕ್ರಿಯೆ ನೀಡುತ್ತಿಲ್ಲ ಎಂದು ಪ್ರಶ್ನಿಸಿದರು.

ಬಿಜೆಪಿ ಶಾಸಕರ ಬಂಧನದಲ್ಲಿ ಕಾಂಗ್ರೆಸ್ ಪಕ್ಷದ ಷಡ್ಯಂತ್ರ ಇದೆ ಎಂದು ಮಾತನಾಡುವುದು ಸುಲಭ. ಆದರೆ ಲೋಕಾಯುಕ್ತರು ಎಲ್ಲವನ್ನು ಅಧ್ಯಯನ ಮಾಡಿ, ಹಿನ್ನೆಲೆ ಹಾಗೂ ಪ್ರಸಕ್ತ ವಿದ್ಯಮಾನಗಳನ್ನು ಆದರಿಸಿಯೇ ದಾಳಿ ಮಾಡಿರುತ್ತಾರೆ. ಅನಗತ್ಯವಾಗಿ ಅಥವಾ ಆಧಾರದ ರಹಿತವಾಗಿ ಕಾರ್ಯಾಚರಣೆ ಮಾಡಿರುವುದಿಲ್ಲ ಎಂದರು.ಶಾಲೆಗಳಲ್ಲಿ ಮೊಬೈಲ್ ನಿಷೇಧಿಸಲು ಚಿಂತನೆ ನಡೆದಿದೆ. 16 ವರ್ಷದ ಒಳಗಿನ ಮಕ್ಕಳಿಗೆ ಮೊಬೈಲ್ ಕೊಟ್ಟರೆ ಅಧ್ಯಯನದ ಮೇಲೆ ಕೆಲಸ ಪರಿಣಾಮವಾಗಲಿದೆ ಎಂದು ಹಲವು ಅಧ್ಯಯನ ವರದಿಗಳು ತಿಳಿಸಿವೆ.ಹೀಗಾಗಲೇ ಆಸ್ಟ್ರೇಲಿಯಾ ಸೇರಿದಂತೆ ಹಲವು ದೇಶಗಳಲ್ಲಿ ವಿದ್ಯಾರ್ಥಿಗಳಿಗೆ ಮೊಬೈಲ್ ಬಳಕೆಯನ್ನು ನಿಷೇಧಿಸಲಾಗಿದೆ. ರಾಜ್ಯದಲ್ಲಿಯೂ ಅದೇ ರೀತಿಯ ಕ್ರಮ ಕೈಗೊಳ್ಳಲು ಮುಖ್ಯಮಂತ್ರಿಯವರು ವರದಿ ಕೇಳಿದ್ದಾರೆ ಎಂದರು.

ಕಾಲೇಜು ವಿದ್ಯಾರ್ಥಿ ಸಂಘಗಳ ಚುನಾವಣೆ ಹಿನ್ನೆಲೆಯಲ್ಲಿ ಎರಡು ಮೂರು ಗುಂಪುಗಳಾಗಿ ಸಂಘರ್ಷಗಳಾಗುತ್ತಿತ್ತು. ಕೆ.ಹೆಚ್.ರಂಗನಾಥ್ ಉನ್ನತ ಶಿಕ್ಷಣ ಸಚಿವರಾಗಿದ್ದಾಗ ವಿದ್ಯಾರ್ಥಿ ಸಂಘಗಳ ಚುನಾವಣೆಯನ್ನು ರದ್ದು ಮಾಡಿದ್ದರು.

ತಾವು ಉನ್ನತ ಶಿಕ್ಷಣ ಸಚಿವರಾಗಿದ್ದಾಗ ಸಿಂಡಿಕೇಟ್ ಗೆ ನಡೆಯುತ್ತಿದ್ದ ಚುನಾವಣೆಯನ್ನು ನಿಷೇಧ ಮಾಡಲಾಗಿತ್ತು. ಈಗ ಮತ್ತೆ ಮರುಪರಿಶೀಲಿಸುವ ಚರ್ಚೆಗಳು ನಡೆಯುತ್ತಿವೆ. ಸಚಿವ ಸಂಪುಟದಲ್ಲಿ ಯಾವ ರೀತಿಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ ಎಂಬುದನ್ನು ಕಾದು ನೋಡುವುದಾಗಿ ಹೇಳಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ನಡುವೆ



ನಡೆಯುತ್ತಿರುವ ಜಟಾಪಟಿಗೆ ಸಂಬಂಧಪಟ್ಟಂತೆ ತಾವು ಪ್ರತಿಕ್ರಿಯಿಸುವುದಿಲ್ಲ. ಸಿದ್ದರಾಮಯ್ಯನವರು ಹಿಂದೆ ಜೆಡಿಎಸ್‌ನಲ್ಲಿದ್ದವರು. ಆ ಪಕ್ಷದಿಂದ ಅವರನ್ನು ಹೊರಹಾಕಲಾಯಿತು. ಜೆಡಿಎಸ್ ನಾಯಕರು ಮತ್ತು ಸಿದ್ದರಾಮಯ್ಯ ಅವರ ನಡುವೆ ಏನಿವೆಯೋ ನಮಗೇನು ಗೊತ್ತು ಎಂದರು. ಸಿದ್ದರಾಮಯ್ಯ ತಮ ಜೀವನದ್ದಕ್ಕೂ ಸಾಮಾಜಿಕ ನ್ಯಾಯಕ್ಕೆ ಬದ್ಧರಾಗಿಯೇ ಕೆಲಸ ಮಾಡಿದ್ದಾರೆ. ಅವರ ರಾಜಕೀಯ ಜೀವನದ ಅಡಿಪಾಯವು ಅದರ ಆಧಾರದ ಮೇಲೆಯೇ ನಿಂತಿದೆ. ಹೊಸದಾಗಿ ಅವರು ಏನನ್ನೂ ಮಾಡಬೇಕಿಲ್ಲ ಎಂದರು.

## ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ತಜ್ಞ ವೈದ್ಯರ ನೇಮಕಕ್ಕೆ ಕರವೇ ವತಿಯಿಂದ ಮನವಿ



ಯುವಮಾರ್ಗ ಸುದ್ದಿ

**ಮಾನ್ವಿ,ಫೆ.23–** ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಹೆಚ್.ಶಿವರಾಮೇಗೌಡ ಬಣ ತಾಲೂಕು ಘಟಕವತಿಯಿಂದ ಮುಖ್ಯ ಮಂತ್ರಿಗಳಿಗೆ ಉಪ ತಹಸೀಲ್ದಾರ್ ವಿನಾಯಕರಾವ್ ರವರ ಮೂಲಕ ಕರವೇ ತಾ.ಅಧ್ಯಕ್ಷ ನರಸಿಂಹ ಮನವಿ ಸಲ್ಲಿಸಿ ಮಾತನಾಡಿ ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಅಗತ್ಯವಿರುವ ಕಾಯಂ ಸ್ತ್ರೀರೋಗ ತಜ್ಞರು, ಸ್ಕ್ಯಾನಿಂಗ್ ತಜ್ಞರು, ಮಕ್ಕಳ ತಜ್ಞರು, ಅರವಳಿಕೆ ತಜ್ಞರನ್ನು ಕೂಡಲೆ ನೇಮಕ ಮಾಡುವ ಮೂಲಕ ಮಹಿಳೆಯರಿಗೆ ಮಕ್ಕಳಿಗೆ, ಆಸ್ಪತ್ರೆಯಲ್ಲಿ ಉತ್ತಮ ಚಿಕಿತ್ಸೆಯನ್ನು ನೀಡುವುದಕ್ಕೆ ಅಗತ್ಯ ಕ್ರಮಕೈಗೊಳ್ಳುವಂತೆ ಒತ್ತಾಯಿಸಿದರು.

ದೀಪಕ್ ಯಾದವ್, ರವಿಕುಮಾರ ಮದ್ಲಾಪೂರ್, ತಾಯಪ್ಪ, ಅಂಜಿ ಯಾದವ್, ಅನಿಲ್ ಕುಮಾರ, ಹರೀಶ್ ಕಾತರಕಿ, ಶಾಂತಕುಮಾರ್, ಇದ್ದರು.

## ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೂಲಿಕಾರ್ಮಿಕರಿಗೆ ಕೆಲಸ ನೀಡಿ: ಕನ್ನಡ ಸೇನೆ ಕರ್ನಾಟಕ ಮನವಿ

ಯುವಮಾರ್ಗ ಸುದ್ದಿ

**ಅರಕೇರಾ,ಫೆ.23–**ಕನ್ನಡ ಸೇನೆ ಕರ್ನಾಟಕ ಅರಕೇರಾ ತಾಲೂಕು ಘಟಕದವತಿಯಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೂಲಿಕಾರ್ಮಿಕರಿಗೆ ಕೆಲಸ ನೀಡುವಂತೆ ಕನ್ನಡ ಸೇನೆ ಕರ್ನಾಟಕ ತಾಲೂಕ ಘಟಕದ ಅಧ್ಯಕ್ಷರಾದ ಮೈಹಿಬೂಬ ಬಡಿಗೇರಾ ಹಾಗೂ ಪದಾಧಿಕಾರಿಗಳು ಅರಕೇರಾ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಪತ್ರ ನೀಡಿದರು.

ಅರಕೇರಾ ಪಟ್ಟಣದಲ್ಲಿ ಬಡ ಕೂಲಿ ಕಾರ್ಮಿಕರು ಕೆಲಸಕ್ಕೆ ಅರ್ಜಿ ಸಲ್ಲಿಸಿ ಸುಮಾರು 2 ತಿಂಗಳು ಆದರೂ ಕೆಲಸ ನೀಡಿದೆ ತಾಂತ್ರಿಕ ದೋಷ ನೆಪ ಹೇಳುತ್ತಿದ್ದಾರೆ. ಕಾರಣ ಜನರು ಗ್ರಾಮ ಪಂಚಾಯತಿಗೆ ಅಲೇದು ಬೇಸತ್ತು ಹೋಗಿದ್ದಾರೆ,ಗುಳೆ ಹೋಗುತ್ತಿದ್ದಾರೆ.

ಪಂಚಾಯತ ಅಭಿವೃದ್ದಿ ಅಧಿಕಾರಿಗಳು ಕೆಲಸ ನೀಡುವಲ್ಲಿ ಸಂಪೂರ್ಣ ವಿಫಲರಾಗಿದ್ದು ಅವರ ಮೇಲೆ ಸೂಕ್ತ ಕ್ರಮ ಕೈಗೊಂಡು ಬಡ ಕೂಲಿ ಕಾರ್ಮಿಕರಿಗೆ ಕೆಲಸ ನೀಡಬೇಕೆಂದು ಅರಕೇರಾ ತಾಲೂಕು ಪಂಚಾಯತ ಕಾರ್ಯನಿರ್ವಾಕ



ಅಧಿಕಾರಿಗಳಿಗೆ ಕನ್ನಡ ಸೇನೆ ಕರ್ನಾಟಕ ತಾಲೂಕು ಘಟಕದವತಿಯಿಂದ ಮನವಿಮಾಡಿಕೊಂಡರು. ಒಂದುವೇಳೆ ಕೆಲಸ ನೀಡದಿದ್ದರೆ ಮುಂದಿನ ದಿನಗಳಲ್ಲಿ ಪಂಚಾಯತ ಮುಂದೆ ಅನಿರ್ದಿಷ್ಟ ಧರಣಿ ಹಮ್ಮಿಕೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದ್ದಾರೆ.

ಸಂದರ್ಭದಲ್ಲಿ ಕನ್ನಡ ಸೇನೆ ಕರ್ನಾಟಕ ತಾಲೂಕ ಘಟಕದ ಅಧ್ಯಕ್ಷರಾದ ಮೈಹಿಬೂಬ ಬಡಿಗೇರಾ ಪ್ರಧಾನ ಕಾರ್ಯದರ್ಶಿ ಹನುಂತ್ರಾಯಗಾಲಿ, ಅರಕೇರಾ ನಗರ ಘಟಕದ ಅಧ್ಯಕ್ಷರಾದ ಶಿವಗೇನಿ , ನಗರ ಘಟಕದ ಪ್ರಧಾನ ಕಾರ್ಯದರ್ಶಿ ಬಸನಗೌಡ ಎಂ, ಕರ್ನಾಳ ,ರಮೇಶ ಸಾತಲ್, ಯಲ್ಲಪ್ಪ ಸಾತಲ್ ಉಪಸ್ಥಿತರಿದ್ದರು.

## ಕಣ್ಣುಗಳ ಆರೈಕೆಗೆ ನಾವೆಲ್ಲರೂ ಮಹತ್ವ ನೀಡೋಣ: ಡಿ.ಹೆಚ್.ಓ ಡಾ.ಸುರೇಂದ್ರ ಬಾಬು

ಯುವಮಾರ್ಗ ಸುದ್ದಿ

**ರಾಯಚೂರು ಫೆ,23–** ಪ್ರತಿ ವ್ಯಕ್ತಿಯ ಜೀವನದಲ್ಲಿ ಕಣ್ಣುಗಳು ಕೇವಲ ದೇಹದ ಅಂಗ ಮಾತ್ರ ಅಲ್ಲ, ವ್ಯಕ್ತಿಯ ಸಾಧನೆ, ಕುಟುಂಬದ ನಿರ್ವಹಣೆ ಸೇರಿದಂತೆ ಜೀವನಪೂರ್ತಿ ಪ್ರತಿ ಹಂತದಲ್ಲೂ ತನ್ನದೆ ಮಹತ್ವ ಸಾರುವ ಕಣ್ಣುಗಳು ಆರೈಕೆಗೆ ನಾವೆಲ್ಲರೂ ಮಹತ್ವ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.

ಇತ್ತೀಚೆಗೆ ನಗರದ ನವೋದಯ ವೈದ್ಯಕೀಯ ಮಹಾವಿದ್ಯಾಲಯದ ಎಸ್ ಆರ್ ಹೆಗಡೆ ಸಿಲ್ವರ್ ಜ್ಯುಬಿಲಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನವೋದಯ ವೈದ್ಯಕೀಯ ಶಿಕ್ಷಣ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ನಿರಂತರ ವೈದ್ಯಕೀಯ ಆರೋಗ್ಯ ಶಿಕ್ಷಣ ಕಾರ್ಯಕ್ರಮದಡಿ ಸಮುದಾಯದಲ್ಲಿ ಕಣ್ಣುಗಳ ಆರೈಕೆಯಲ್ಲಿ ಡಿಬಿಸಿಎಸ್ ಪಾತ್ರ ಎಂಬ ವಿಷಯದಡಿ ಕಣ್ಣಿನ ಆರೈಕೆಯ ನಿರಂತರ ವೈದ್ಯಕೀಯ ಆರೋಗ್ಯ ಶಿಕ್ಷಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಂಧತ್ವವನ್ನು ತಡೆಗಟ್ಟಲು ಆರೋಗ್ಯ ಇಲಾಖೆ ಕ್ಷೇತ್ರ ಮಟ್ಟದಲ್ಲಿ ತಪಾಸಣೆ, ಕನ್ನಡಕ ವಿತರಣೆ, ಉಚಿತ ನೇತ್ರ ಶಸ್ತ್ರಚಿಕಿತ್ಸ ಶಿಬಿರಗಳನ್ನು ಏರ್ಪಡಿಸುತ್ತಿದ್ದು, ಇತ್ತಿಚಿಗೆ ಕರ್ನಾಟಕ ಸರಕಾರವು ಸಮುದಾಯ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆಗಳಲ್ಲಿ ಸುಸಜ್ಜಿತ ಆಶಾಕಿರಣ ದೃಷ್ಟಿಕೇಂದ್ರಗಳನ್ನು ಆರಂಭಿಸಿದ್ದು, ಈ ದಿಶೆಯಲ್ಲಿ ಕಣ್ಣಿನ ಆರೈಕೆ ಮತ್ತು ಅಂಧತ್ವ ತಡೆಗಟ್ಟುವಿಕೆಯ






ಬಗ್ಗೆ ಸಮುದಾಯ ಜಾಗೃತಿ ಅವಶ್ಯವಾಗಿದ್ದು, ನವೋದಯ ವೈದ್ಯಕೀಯ ಮಹಾವಿದ್ಯಾಲಯವು 2003ರಿಂದ ಡಿಬಿಸಿಎಸ್ ಅನ್ನು ಅನುಷ್ಠಾನಗೊಳಿಸಿದ್ದು, ನೇತ್ರ ಸುರಕ್ಷತೆಗೆ ಅವರ ಸಾಮಾಜಿಕ ಕಳಕಳಿಗೆ ಸಾಕ್ಷಿಯಾಗಿದೆ ಎಂದರು.

ಈ ವೇಳೆ ನವೋದಯ ಶೈಕ್ಷಣಿಕ ಟ್ರಸ್ಟ್ ರಜಿಸ್ಟರರ್ ಡಾ.ಶ್ರೀನಿವಾಸ್ ಟಿ, ಅವರು ಮಾತನಾಡಿ, ಕರ್ನಾಟಕ ಸರಕಾರದ ಮಾರ್ಗಸೂಚಿಯಡಿ ಆರೋಗ್ಯ ಇಲಾಖೆಯ ಜಿಲ್ಲಾ ಅಂಧತ್ವ ನಿಯಂತ್ರಣ ಸಂಘದೊಂದಿಗೆ ನಿರಂತರ ಸಮನ್ವಯ ಕೈಗೊಂಡು ಬಡವರು ಮತ್ತು ನಿರ್ಗತಿಕರಿಗೆ ಉಚಿತ ಕಣ್ಣಿನ ಆರೈಕೆಗಾಗಿ 2003 ರಿಂದ ಡಿಬಿಸಿಎಸ್ ಅಡಿಯಲ್ಲಿ 25,000ಕ್ಕೂ ಹೆಚ್ಚು ನೇತ್ರಪೋರೆ ಶಸ್ತ್ರಚಿಕಿತ್ಸೆಯನ್ನು ಕೈಗೊಳ್ಳಲಾಗಿದೆ. 2011 ರಿಂದ 100ಕ್ಕೂ ಹೆಚ್ಚು ನೇತ್ರಗಳನ್ನು ದಾನಿಗಳಿಂದ ಸಂಗ್ರಹಿಸಿದ್ದು, 100ಕ್ಕೂ ಹೆಚ್ಚು ಜನ ಅಂಧತ್ವ ಸಮಸ್ಯೆಯುಳ್ಳವರು ಇದರ ಪ್ರಯೋಜನ ಪಡೆದಿದ್ದು, ಇದಕ್ಕಾಗಿ ಕಣ್ಣಿನ ಸಮಸ್ಯೆಗಳಾದ, ದೃಷ್ಟಿದೊಷ, ಗ್ಲುಕೋಮಾ, ಡಯಾಬಿಟಿಕ್ ರೆಟಿನೋಪತಿ, ಮುಂತಾದವುಗಳಿಗೆ ಚಿಕಿತ್ಸೆಯನ್ನು ಎನ್‌ಎಮ್‌ಸಿಹೆಚ್ ಮತ್ತು ಆರ್‌ಸಿಯ ನೇತ್ರವಿಜ್ಞಾನ ವಿಭಾಗವು ಮುಂದುವರೆಸಿದ್ದು, ಇನ್ನು ಹೆಚ್ಚಿನ ಕಾರ್ಯಕ್ರಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಈ ವೇಳೆ ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿ ಡಾ.ನಂದಿತಾ ಎಮ್‌ಎನ್, ನವೋದಯ ವೈದ್ಯಕೀಯ ಕಾಲೇಜು ನಿವೃತ್ತ ಪ್ರಾಧ್ಯಾಪಕಿ ಡಾ.ಗೀತಾಮಣಿ, ಲಾತೂರ್‌ನ ಎಂಐಎಂಎಸ್‌ಆರ್ ವೈದ್ಯಕೀಯ ಕಾಲೇಜಿನ ಸಮುದಾಯ ಔಷಧ ಪ್ರಾಧ್ಯಾಪಕ ಡಾ.ಅನಂತ್ ಟಕಲ್ಕರ್ ಅವರು ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ನವೋದಯ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿಯ ನಿರ್ದೇಶಕರು ಡಾ.ಅಮೃತ ರೆಡ್ಡಿ, ನೇತ್ರವಿಜ್ಞಾನ ವಿಭಾಗದ ಮುಖ್ಯಸ್ಥೆ ಡಾ.ಅನುಪಮಾ ತಕ್ಲಿಕರ್, ಕೆಎಂಸಿ ವೀಕ್ಷಕ ಇಎನ್‌ಟಿ ಶಸ್ತ್ರಚಿಕಿತ್ಸಕ ಡಾ.ವಾಸುದೇವ್ ಜಹಗೀದಾರ್, ವೈದ್ಯಕೀಯ ಅಧಿಕ್ಷಕರು ಡಾ.ಅರುಣ್ ಕೆ ಎನ್, ಪ್ರಭಾರಿ ಪ್ರಾಂಶುಪಾಲರು ಡಾ.ವಿಶಾಲ್ ಸಾಳ್ವೆ, ಆರ್‌ಎಂಒ ಡಾ.ನಾರಾಯಣ ಪೆಂಡ್ಲಿಕಲ್, ನೇತ್ರವಿಜ್ಞಾನ ವಿಭಾಗದ ಪ್ರಾಧ್ಯಾಪಕಿ ಡಾ.ಶರಣಬಸಮ್ಮ, ಡಾ.ರೇಷ್ಮಾ, ಕಾರ್ಯಕ್ರಮದ ಸಂಘಟನಾ ಕಾರ್ಯದರ್ಶಿ ಡಾ.ಲವನ್ ಕುಮಾರ್, ಸಹಾಯಕ ಪ್ರಾಧ್ಯಾಪಕರಾದ ಡಾ.ಕಾಂಚನಾ ಬಿ ಕೆ, ಡಾ.ವೈಭವ, ಡಾ.ಶ್ವೇತಾ ಜಿ, ಡಾ.ಅಪೂರ್ವ ಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಗುರು ಗಂಪಾ ಸೇರಿದಂತೆ ಇತರರು ಇದ್ದರು.

# ಶಾಲೆಗಳಲ್ಲಿ ಮೊಬೈಲ್ ನಿಷೇಧ

**ಬೆಂಗಳೂರು, ಫೆ. 23–** ರಾಜ್ಯದ ಶಾಲೆಗಳಲ್ಲಿ ಮೊಬೈಲ್ ಫೋನ್ ನಿಷೇಧ ಮಾಡುವ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚಿಂತನೆ ನಡೆದಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.
ಶಾಲೆಗಳಲ್ಲಿ ಮಕ್ಕಳಿಗೆ ಮೊಬೈಲ್ ಫೋನ್‌ಗಳನ್ನು ಕೊಟ್ಟರೆ ಅವರ ಗಮನ ಬೇರೆಡೆ ಹೋಗಿ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತದೆ ಎಂಬ ವರದಿಗಳು ಇವೆ. ಹಾಗಾಗಿ ಶಾಲೆಗಳಲ್ಲಿ ಮೊಬೈಲ್ ಫೋನ್ ಬ್ಯಾನ್ ಮಾಡುವ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚಿಂತನೆ ನಡೆದಿದೆ ಎಂದರು.
ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಹ 16 ವರ್ಷದೊಳಗಿನ ವಿದ್ಯಾರ್ಥಿಗಳಿಗೆ ಮೊಬೈಲ್ ಫೋನ್ ಬಳಕೆಯನ್ನು ನಿಷೇಧ ಮಾಡುವ ಬಗ್ಗೆ ಮಾತನಾಡಿದ್ದಾರೆ. ಹಾಗಾಗಿ ಸದ್ಯದಲ್ಲೇ ಶಾಲೆಗಳಲ್ಲಿ ಮೊಬೈಲ್ ನಿಷೇಧಗೊಳಿಸುವ ಬಗ್ಗೆ ಒಂದು ತೀರ್ಮಾನ ಮಾಡುತ್ತೇವೆ ಎಂದರು.

ಆಸ್ಟ್ರೇಲಿಯಾ, ಯುರೋಪ್‌ನ ಹಲವು ದೇಶಗಳಲ್ಲಿ ಈಗಾಗಲೇ ಶಾಲೆಗಳಲ್ಲಿ ಮೊಬೈಲ್ ನಿಷೇಧ ಮಾಡಲಾಗಿದೆ. ಅದೇ ರೀತಿ ರಾಜ್ಯದಲ್ಲೂ ಮೊಬೈಲ್ ನಿಷೇಧ ಜಾರಿ ಮಾಡುವ ಚರ್ಚೆಗಳು ನಡೆದಿವೆ. ಅಂತಿಮವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಜತೆ ಚರ್ಚಿಸಿ ಸಚಿವ ಸಂಪುಟದಲ್ಲಿ ಈ ಬಗ್ಗೆ ಒಂದು ತೀರ್ಮಾನ ಕೈಗೊಳ್ಳುತ್ತೇವೆ ಎಂದು ಅವರು ಹೇಳಿದರು.

ಶಾಲಾ ಮಕ್ಕಳು ಮೊಬೈಲ್ ಬಳಸುವುದರಿಂದ ಆಗುವ ಸಾಧಕ–ಬಾಧಕಗಳ ಬಗ್ಗೆಯೂ ಅಧ್ಯಯನ ಮಾಡಿ ಅಂತಿಮವಾಗಿ ಮೊಬೈಲ್ ನಿಷೇಧದ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದು ತಿಳಿಸಿದರು.

ಕಟ್ಟೆಚ್ಚರ–ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಉಗ್ರರು ಸ್ಫೋಟಕ್ಕೆ ಸಂಚು ನಡೆಸಿರುವುದು ಬೆಳಕಿಗೆ ಬಂದಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲೂ ಎಲ್ಲೆಡೆ ಕಟ್ಟೆಚ್ಚರ ವಹಿಸುವಂತೆ ಪೊಲೀಸರಿಗೆ ಸೂಚನೆ ನೀಡಿದ್ದೇನೆ ಎಂದರು.

ದೆಹಲಿ ಪೊಲೀಸರು ವಿಧ್ವಂಸಕ ಕೃತ್ಯಗಳಿಗೆ ಸಂಚು ನಡೆಸಿದ್ದ 8 ಜನರನ್ನು ಬಂಧಿಸಿರುವವರಲ್ಲಿ ಬಾಂಗ್ಲಾ ದೇಶಿಯರು ಇದ್ದಾರೆ ಎಂಬ ವರದಿಗಳಿದ್ದು, ನಾವು ಸಹ ಬಾಂಗ್ಲಾ ವಲಸಿಗರ ಬಗ್ಗೆ ಎಚ್ಚರ ವಹಿಸಿದ್ದೇವೆ. ಕಳೆದ 1 ತಿಂಗಳಿನಿಂದಲೇ ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ಬಾಂಗ್ಲಾ ವಲಸಿಗರ ಪತ್ತೆಗೆ ವಿಶೇಷ ಆಂದೋಲನವನ್ನೆ ಕೈಗೊಂಡಿದ್ದೇವೆ. ಎಲ್ಲಾ ಜಿಲ್ಲೆಗಳ ಪೊಲೀಸ್ ವರಿಷ್ಠರಿಗೆ ಅಕ್ರಮ ಬಾಂಗ್ಲಾ ವಲಸಿಗರ ಪತ್ತೆಗೆ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದೇನೆ. ಜತೆಗೆ ಬೆಂಗಳೂರಿನಲ್ಲಿ ಪೊಲೀಸ್ ಠಾಣೆ ಮಟ್ಟದಲ್ಲಿ ಅಕ್ರಮ ವಲಸಿಗರು, ಅನುಮಾನಾಸ್ಪದ ಚಟುವಟಿಕೆಗಳನ್ನು ನಡೆಸುವ ವ್ಯಕ್ತಿಗಳ ಮೇಲೆ ನಿಗಾ ಇರಿಸಲಾಗಿದೆ. ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಗೃಹ ಇಲಾಖೆ ಕೈಗೊಂಡಿದೆ ಎಂದು ಅವರು ಹೇಳಿದರು.

ಸಾಮಾಜಿಕ ನ್ಯಾಯದ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ನಡುವೆ ನಡೆದಿರುವ ಜಟಾಪಟಿ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸಾಮಾಜಿಕ ನ್ಯಾಯವೇ ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜಕೀಯ ಅಡಿಪಾಯವಾಗಿದೆ. ಮೊದಲಿನಿಂದಲೂ ಅವರು ಅದನ್ನೇ ಮಾಡುತ್ತಾ ಬಂದಿದ್ದಾರೆ ಎಂದು ಹೇಳುವ ಮೂಲಕ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನಿಲುವನ್ನು ಸಮರ್ಥಿಸಿಕೊಂಡರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಇಡೀ ರಾಜಕೀಯ



ಜೀವನದುದ್ದಕ್ಕೂ ಸಾಮಾಜಿಕ ನ್ಯಾಯದ ಸಿದ್ಧಾಂತದ ಅಡಿಯೇ ರಾಜಕಾರಣ ಮಾಡಿಕೊಂಡು ಬಂದಿದ್ದಾರೆ. ಅದರಲ್ಲಿ ಹೊಸದೇನು ಇಲ್ಲ. ಸ್ವಾಭಿವಿಕವಾಗಿ ಸಿದ್ದರಾಮಯ್ಯನವರು ಸಾಮಾಜಿಕ ನ್ಯಾಯದ ಬದ್ಧತೆಯನ್ನು ಮತ್ತೊಮ್ಮೆ ಹೇಳಿದ್ದಾರೆ ಅಷ್ಟೇ ಎಂದರು. ಜೆಡಿಎಸ್‌ನಲ್ಲಿ ನಡೆದ ವಿದ್ಯಮಾನಗಳ ಬಗ್ಗೆ ಏನೆಲ್ಲಾ ನಡೆದಿದೆ ಎಂಬ ಬಗ್ಗೆ ನಮಗೆ ಗೊತ್ತಿಲ್ಲ. ಸಿದ್ದರಾಮಯ್ಯನವರು ಮೊದಲು ಜೆಡಿಎಸ್‌ನಲ್ಲೇ ಇದ್ದರು. ನಂತರ ಅವರನ್ನು ಪಕ್ಷದಿಂದ ಹೊರಗೆ ಹಾಕಿದರು. ಹಾಗಾಗಿ ಜೆಡಿಎಸ್‌ನಲ್ಲಿ ಈ ಹಿಂದಿನ ಆಂತರಿಕ ವಿಚಾರಗಳ ಬಗ್ಗೆ ಕುಮಾರಸ್ವಾಮಿ ಮತ್ತು ಸಿದ್ದರಾಮಯ್ಯನವರ ನಡುವೆ ನಡೆದಿರುವ ವಾಕ್ಸಮರಕ್ಕೆ ನಾನು ಉತ್ತರ ಕೊಡಲು ಆಗಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಅಧಿಕಾರ ಹಂಚಿಕೆಗೆ ಸಂಬಂಧಿಸಿದಂತೆ ದಲಿತ ಸಿಎಂ ವಿಚಾರ ಮತ್ತೆ ಮುನ್ನಲೆಗೆ ಬಂದಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಇದನ್ನೆಲ್ಲಾ ವಿರೋಧ ಪಕ್ಷಗಳು ಮಾಡುತ್ತಿವೆ. ಬಿಜೆಪಿ–ಜೆಡಿಎಸ್ ತಮ್ಮ ಹುಳುಕುಗಳನ್ನು ಮುಚ್ಚಿಕೊಳ್ಳಲು ಈ ರೀತಿ ದಲಿತ ಸಿಎಂ ಕೂಗು ತಂದಿದ್ದಾರೆ ಎಂದು ದೂರಿದರು.
ದಲಿತರನ್ನು ಮುಖ್ಯಮಂತ್ರಿ ಮಾಡುವುದು ಕಾಂಗ್ರೆಸ್ ಪಕ್ಷವೇ, ಇನ್ಯಾರು ಮಾಡುತ್ತಾರೆ. ಯಾವಾಗ ಯಾರನ್ನು ಸಿಎಂ ಮಾಡಬೇಕು ಎಂಬುದನ್ನು ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ಅವರು ಹೇಳಿದರು.
ಗುತ್ತಿಗೆದಾರನಿಂದ ಲಂಚ ಪಡೆಯುವಾಗ ಲೋಕಾಯುಕ್ತ ಬಲೆಗೆ ಸಿಕ್ಕಿ ಬಿದ್ದಿರುವ ಬಿಜೆಪಿ ಶಾಸಕ ಚಂದ್ರು ಲಮಾಣಿ ಪ್ರಕರಣದಲ್ಲಿ ಷಡ್ಯಂತ್ರ ನಡೆದಿದೆ ಎಂಬ ಆರೋಪಗಳನ್ನು ತಳ್ಳಿ ಹಾಕಿದ ಅವರು, ಲೋಕಾಯುಕ್ತ ಎಲ್ಲವನ್ನು ನೋಡಿಯೇ ಕಾರ್ಯಾಚರಣೆ ನಡೆಸಿದ್ದಾರೆ. ಷಡ್ಯಂತ್ರವೇನೂ ಇಲ್ಲ ಎಂದರು.
ಭ್ರಷ್ಟಾಚಾರದ ಬಗ್ಗೆ ಪಾಠ ಮಾಡುವ ಬಿಜೆಪಿ ನಾಯಕರು ತಮ್ಮ ಶಾಸಕ ಲೋಕಾಯುಕ್ತ ಬಲೆಗೆ ಬಿದ್ದಿರುವ ಬಗ್ಗೆ ಏನೂ ಮಾತನಾಡದೆ ಮೌನವಾಗಿದ್ದಾರೆ ಎಂದು ಅವರು ಟೀಕಿಸಿದರು.

ವಿಶ್ವವಿದ್ಯಾಲಯ ಹಾಗೂ ಕಾಲೇಜುಗಳಲ್ಲಿ ವಿದ್ಯಾರ್ಥಿ ಸಂಘಕ್ಕೆ ಚುನಾವಣೆ ನಡೆಸುವ ಬಗ್ಗೆ ಸಚಿವ ಸಂಪುಟ ತೀರ್ಮಾನ ಕೈಗೊಳ್ಳುತ್ತದೆ ಎಂದ ಅವರು ಈ ಹಿಂದೆ ಕೆ.ಎಚ್. ರಂಗನಾಥ್ ಅವರು ಉನ್ನತ ಶಿಕ್ಷಣ ಸಚಿವರಾಗಿದ್ದಾಗ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ವಿದ್ಯಾರ್ಥಿ ಚುನಾವಣೆಗಳಲ್ಲಿ ಘರ್ಷಣೆಗಳು ನಡೆದಿದ್ದವು. ಆ ಕಾರಣಕ್ಕೆ ವಿದ್ಯಾರ್ಥಿ ಚುನಾವಣೆಗಳನ್ನು ನಿಷೇಧಿಸಲಾಗಿತ್ತು ಎಂದರು.

# ತಳವಾರರಿಗೆ ಪರಿಶಿಷ್ಟ ಪಂಗಡದ ಸೌಲಭ್ಯದ ಕುರಿತು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ ಹೇಳಿಕೆಗೆ ತೀವ್ರ ಖಂಡನೆ.

ಯುವಮಾರ್ಗ ಸುದ್ದಿ

ವಿಧಾನ ಪರಿಷತ್ ಸದಸ್ಯ ಮತ್ತು ಮುಖ್ಯ ಸಚೇತಕರಾದ ಎನ್.ರವಿಕುಮಾರರವರು ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಮೂಲಕ ತಳವಾರರಿಗೆ ಪರಿಶಿಷ್ಟ ಪಂಗಡದ ಸೌಲಭ್ಯವನ್ನು ಮುಂದುವರೆಸಬೇಕು ಮತ್ತು ವಾಲ್ಮೀಕಿ ನಾಯಕ ಸಮುದಾಯದ ಹೋರಾಟಕ್ಕೆ ಸರಕಾರ ಮಣಿಯಬಾರದು ಎಂದು ಹೇಳಿಕೆ ನೀಡಿರುವುದು ಹಾಸ್ಯಸ್ಪದವಾಗಿದೆ. ತಳವಾರರಿಗೆ ಎಸ್.ಟಿ ಪ್ರಮಾಣ ಪತ್ರಗಳನ್ನು ನೀಡಬೇಕು ಎಂದು ಹೇಳುತ್ತಿದ್ದಾರೆ ಆದರೆ ಯಾವ ಸಮುದಾಯದ ತಳವಾರರು ಎಂದು ಸ್ಪಷ್ಟಪಡಿಸಬೇಕು. ಎಲ್ಲಾ ಜಾತಿಗಳಲ್ಲೂ ತಳವಾರ ಸಮುದಾಯದವರು ಇದ್ದಾರೆ. ಕೇಂದ್ರ ಸರಕಾರದ ಗೆಜೆಟನ್ನು ಒಮ್ಮೆ ಸರಿಯಾಗಿ ಓದಿ ಅರ್ಥೈಸಿಕೊಳ್ಳಬೇಕು. ನಾಯಕ ಸಮುದಾಯದ ತಳವಾರರಿಗೆ ಮಾತ್ರ ಎಸ್,ಟಿ ಪಟ್ಟಿಗೆ ಸೇರಿಸಿದ್ದಾರೆ ಇತರ ಸಮುದಾಯದ ತಳವಾರರು ಅಲ್ಲ ಎಂಬುದು ಮೊದಲು ಮನನ ಮಾಡಿಕೋಳ್ಳಬೇಕು. ತಾವು ಹೇಳುತ್ತಿರುವ ತಳವಾರರು ಯಾರು ಎಂದು ಮೊದಲು ಸ್ಪಷ್ಟಪಡಿಸಬೇಕು.

ಈಗಾಗಲೇ ಕಳೆದ ಸರಕಾರದ ಅವಧಿಯಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿಯವ 'ರಿಂದ ಕಲಬುರ್ಗಿಯಲ್ಲಿ ಹಿಂದುಳಿದ ವರ್ಗಗಳ ಸಮಾವೇಶದಲ್ಲಿ ತಪ್ಪು ಹೇಳಿಕೆಗಳನ್ನು ಹೇಳಿಸುವ ಮೂಲಕ ಎಲ್ಲಾ ಎಸ್.ಟಿ ಕ್ಷೇತ್ರಗಳಲ್ಲಿ ಬಿಜೆಪಿ ಸೋಲಲು ಕಾರಣಿಕರ್ತರಾದ ಎನ್.ರವಿ ಕುಮಾರನ್ನು ಬಿಜೆಪಿಯವರು ಕೂಡಲೇ ವಿಧಾನ ಪರಿಷತ್ ಸದಸ್ಯ ಸ್ಥಾನದಿಂದ ಕೆಳಗಿಸಬೇಕು ಎಂದು ಆಗ್ರಹಿಸುತ್ತೇವೆ. ಇಂತಹ ತಪ್ಪು ಹೇಳಿಕೆಗಳನ್ನು ನೀಡುವ ಮೂಲಕ ಸಮುದಾಯಗಳ ನಡುವೆ ಸಂಘರ್ಷಕ್ಕೆ ಕಾರಣರಾಗುತ್ತಿದ್ದಾರೆ. ಪ್ರತಿ ಸಮುದಾಯಗಳಲ್ಲೂ ತಳವಾರರು ಇದ್ದಾರೆ ಆದರೆ 1991–



92ರಲ್ಲಿ ವಾಲ್ಮೀಕಿ ನಾಯಕ ಸಮುದಾಯವು ಎಸ್.ಟಿ ಪಟ್ಟಿಗೆ ಸೇರುವ ಸಂದರ್ಭದಲ್ಲಿ ನಾಯಕ ಸಮುದಾಯದ ಉಪ ಪಂಗಡಗಳಾದ ತಳವಾರ ಮತ್ತು ಪರಿವಾರ ಸೇರದೆ ಹೊರಗೆ ಉಳಿದಿದ್ದವು. ಆಗಿನಿಂದಲೂ ನಿರಂತರ ಹೋರಾಟದ ಫಲವಾಗಿ 30 ವರ್ಷಗಳ ನಂತರ ಈಗ ನಾಯಕ ಸಮುದಾಯದ ಉಪ ಪಂಗಡಗಳಾದ ತಳವಾರ ಮತ್ತು ಪರಿವಾರ ಎಸ್.ಟಿ ಪಟ್ಟಿಗೆ ಸೇರಿದೆ. ಕೇಂದ್ರ ಸರಕಾರವು ಎಸ್.ಟಿ ಪಟ್ಟಿಯಲ್ಲಿ ಸೇರಿಸುವ ಸಮಯದಲ್ಲಿ ನಾಯಕ ಸಮುದಾಯದ ಉಪಪಂಗಡಗಳಾಗಿರುವುದರಿಂದಲೇ ತಳವಾರ ಮತ್ತು ಪರಿವಾರ ಪದಗಳನ್ನು ಕ್ರಮ ಸಂಖ್ಯೆ 38ರಲ್ಲಿ ಸೇರಿಸಿದ್ದಾರೆ ಎಂಬುದು ಅರ್ಥೈಸಿಕೊಳ್ಳುವಲ್ಲಿ ವಿಫಲರಾದ ಎನ್.ರವಿಕುಮಾರರವರು ಕೋಡಲೇ ಇಂತಹ ಹೇಳಿಕೆಗಳನ್ನು ನೀಡುವುದು ನಿಲ್ಲಸಬೇಕು ಎಂದು ಆಗ್ರಹಿಸುತ್ತೇವೆ.

# ಬಜೆಟ್‌ನಲ್ಲಿ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಿ : ಡಾ. ಜಾವೀದ್ ಖಾನ್



ಯುವಮಾರ್ಗ ಸುದ್ದಿ

**ಮಾನ್ವಿ,ಫೆ.23–** ರಾಜ್ಯದ ಲಕ್ಷಾಂತರ ವಿದ್ಯಾವಂತ ನಿರುದ್ಯೋಗಿ ಯುವಕರ ಭವಿಷ್ಯವನ್ನು ಗಮನದಲ್ಲಿಟ್ಟು ಕರ್ನಾಟಕ ರಾಜ್ಯ ಬಜೆಟ್‌ನಲ್ಲಿ ಉದ್ಯೋಗ ಸೃಷ್ಟಿ ಮತ್ತು ಖಾಲಿ ಇರುವ ಸರ್ಕಾರಿ ಹುದ್ದೆಗಳ ಭರ್ತಿಗೆ ಆದ್ಯತೆ ನೀಡಬೇಕು ಎಂದು ದಲಿತ ಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಡಾ. ಜಾವೀದ್ ಖಾನ್ ಹೇಳಿದರು.

ಅವರಿಂದ ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಅಪಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಹಲವು ವರ್ಷಗಳಿಂದ ಯುವಕರು ಸರ್ಕಾರಿ ಉದ್ಯೋಗಕ್ಕಾಗಿ ಸಿದ್ಧತೆ ಮಾಡಿಕೊಂಡು ಪರೀಕ್ಷೆಗಳಿಗೆ ಹಾಜರಾಗುತ್ತಿದ್ದರೂ ನೇಮಕಾತಿ ಪ್ರಕ್ರಿಯೆಗಳು ವಿಳಂಬವಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಸರ್ಕಾರ ನೇಮಕಾತಿ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ಹಾಗೂ ಸಮಯಬದ್ಧವಾಗಿ ಪೂರ್ಣಗೊಳಿಸಿ ಯುವಕರಿಗೆ ನ್ಯಾಯಯುತ ಉದ್ಯೋಗಾವಕಾಶಗಳನ್ನು ಒದಗಿಸಬೇಕು ಎಂದು ಅವರು ತಿಳಿಸಿದರು.

ರಾಜ್ಯದ ಶಿಕ್ಷಣ, ಆರೋಗ್ಯ, ಪೊಲೀಸ್, ಗ್ರಾಮೀಣಾಭಿವೃದ್ಧಿ, ಸಮಾಜ ಕಲ್ಯಾಣ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಸಾವಿರಾರು ಹುದ್ದೆಗಳು ಖಾಲಿಯಾಗಿ ಉಳಿದಿದ್ದು, ಇದರಿಂದ ಸಾರ್ವಜನಿಕ ಸೇವೆಗಳ ಮೇಲೆ ಪರಿಣಾಮ ಬೀರುತ್ತಿದೆ. ಇದೇ ಹಿನ್ನೆಲೆದಲ್ಲಿ ರಾಜ್ಯ ಬಜೆಟ್‌ನಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡುವುದರ ಜೊತೆಗೆ ಹೊಸ ಹುದ್ದೆಗಳನ್ನು ಸೃಷ್ಟಿಸಿ ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸುವಂತೆ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ದಲಿತ ಸೇನೆ ಜಿಲ್ಲಾಧ್ಯಕ್ಷರಾದ ಮಾರುತಿ ಚಿಕ್ಕಸುಗೂರು, ಮಹಿಳಾ ಘಟಕ ಜಿಲ್ಲಾಧ್ಯಕ್ಷರಾದ ಜಯಶ್ರೀ, ಕರವೇ ಅಧ್ಯಕ್ಷರಾದ ಸುರೇಶ ಬಾಬು ಸೇರಿದಂತೆ ಇನ್ನಿತರ ರೈತರು ಉಪಸ್ಥಿತರಿದ್ದರು.

# ಬಬಲಾದಿ ಜಾತ್ರೆ: ಈಜು ಬಾರದೆ ಇಬ್ಬರು ಯುವಕರು ನೀರು ಪಾಲು

**ವಿಜಯಪುರ, ಫೆ. 23–** ಜಿಲ್ಲೆಯ ಬಬಲೇಶ್ವರ ತಾಲೂಕಿನ ಬಬಲಾದಿ ಗ್ರಾಮದ ಬಳಿ ಕೃಷ್ಣಾ ನದಿಯಲ್ಲಿ ನೀರಲ್ಲಿ ಮುಳುಗಿ ಇಬ್ಬರು ಯುವಕರು ಸಾವನ್ನಪ್ಪಿದ್ದಾರೆ.

ಬೆಳಗಾವಿ ಜಿಲ್ಲೆಯ ಕಲ್ಲೋಳ ಗ್ರಾಮದ ಸಿದ್ದಪ್ಪ ಇಮಡೇರ್ (22) ಮತ್ತು ಪ್ರಜ್ವಲ್ (21) ಮೃತ ದುರ್ದೈವಿಗಳು.

ನತದೃಷ್ಟ ಯುವಕರು ಬಬಲೇಶ್ವರ ತಾಲೂಕಿನ ಬಬಲಾದಿ ಸದಾಶಿವ ಮುತ್ಯಾನ ಜಾತ್ರೆಗೆ ಬಂದಿದ್ದ ವೇಳೆ ನದಿಗೆ ಇಳಿದಿದ್ದು, ಆಗ ಈ ಅವಘಡ ಸಂಭವಿಸಿದೆ. ಈ ಇಬ್ಬರು ಯುವಕರಿಗೆ ಈಜು ಬರುತ್ತಿರಲಿಲ್ಲ. ಆದಾಗ್ಯೂ ನದಿಯಲ್ಲಿ ಇಳಿದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಈ ಘಟನೆ ಬಬಲೇಶ್ವರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.



# ಕೃಷಿ ಲಾಭದಾಯಕ ಕ್ಷೇತ್ರವಾಗಲೂ ಸಂಶೋಧನೆ ಅಗತ್ಯ:ಸಚಿವ ಈಶ್ವರ್ ಬಿ. ಖಂಡ್ರೆ

**ಬೀದರ, ಫೆ.23:** ಕೃಷಿ ಲಾಭದಾಯಕ ಕ್ಷೇತ್ರವಾಗಲೂ ಚರ್ಚೆ, ಸಂಶೋಧನೆ, ಮಾರುಕಟ್ಟೆ ಲಭ್ಯತೆ, ಸರ್ಕಾರದ ಯೋಜನೆಗಳು ರೈತರ ಮನೆ ಬಾಗಿಲಿಗೆ ತಲುಪುವಂತಾಗಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.
ಅವರು ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಮೀನುಗಾರಿಕೆ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ನಗರದ ನೆಹರು ಕ್ರೀಡಾಂಗಣದಲ್ಲಿ ಆಯೋಜಿಸಿದ ಉದ್ಯೋಗ ಮೇಳ, ಸಿರಿಧಾನ್ಯ ಮೇಳ, ಫಲ ಮತ್ತು ಪುಷ್ಪ ಪ್ರದರ್ಶನ ಹಾಗೂ ಮತ್ಸ ಮೇಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.
ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕೈಗಾರಿಕೆಗಳು ಇಲ್ಲದಿದ್ದರಿಂದ ಶೇ. 75 ಪ್ರತೀಶತ ಜನ ಕೃಷಿ ಮೇಲೆ ಅವಲಂಬನೆ ಆಗಿದ್ದಾರೆ. ಆದ್ದರಿಂದ ಕೃಷಿಗೆ ಉತ್ತೇಜನೆ ನೀಡಬೇಕಿದೆ. ಪ್ರತಿ ವರ್ಷ ಜಿಲ್ಲೆಯಲ್ಲಿ 10 ಲಕ್ಷ ಎಕರೆ ಭೂಮಿಯಲ್ಲಿ ಬಿತ್ತಣಿಕೆ ಮಾಡಲಾಗುತ್ತದೆ. ಅದರಲ್ಲಿ ಶೇ.50 ಸೋಯಾ, ಶೇ.25 ತೊಗರಿ ಹಾಗೂ ಶೇ. 25 ಪ್ರತೀಶತದಲ್ಲಿ ಇತರೆ ಬೆಳೆಗಳನ್ನು ಬೆಳೆಯಲಾಗುತ್ತದೆ. ರೈತರು ಕೇವಲ ಒಂದೇ ಬೆಳೆಗೆ ಅವಲಂಬನೆ ಆಗದೆ ಸಿರಿಧಾನ್ಯಗಳಂತಹ ಬೇರೆ ಬೇರೆ ಬೆಳೆಗಳನ್ನು ಬೆಳೆಸಲು ಮುಂದಾಗಬೇಕು. ಸಿರಿಧಾನ್ಯಗಳು ಕೇವಲ ಆಹಾರವಲ್ಲ; ಆರೋಗ್ಯಪೂರ್ಣ ಜೀವನದ ಭದ್ರ ಆಧಾರವಾಗಿವೆ. ಸಿರಿಧಾನ್ಯಗಳು ಕಡಿಮೆ ನೀರಿನಲ್ಲಿ ಬೆಳೆಯುವ ಶಾಶ್ವತ ಬೆಳೆಗಳಾಗಿದ್ದು, ಹವಾಮಾನ ಬದಲಾವಣೆಯ ಸಂದರ್ಭದಲ್ಲಿಯೂ ರೈತರಿಗೆ ಭದ್ರ ಆದಾಯ ನೀಡುತ್ತವೆ. ಆರೋಗ್ಯ ಮತ್ತು ಕೃಷಿ ಎರಡನ್ನೂ ಒಟ್ಟಿಗೆ ರಕ್ಷಿಸುವ ಶಕ್ತಿ ಸಿರಿಧಾನ್ಯಗಳಲ್ಲಿ ಅಡಗಿದೆ. ಜನರು ತಮ್ಮ ದೈನಂದಿನ ಆಹಾರದಲ್ಲಿ ಸಿರಿಧಾನ್ಯಗಳನ್ನು ಅಳವಡಿಸಿಕೊಳ್ಳಬೇಕು.

ರೈತರು ಮೌಲ್ಯವರ್ಧಿತ ಉತ್ಪನ್ನಗಳತ್ತ ಗಮನಹರಿಸಬೇಕು ಎಂದ ಅವರು ಈ ಮೇಳದ ಮುಖ್ಯ ಉದ್ದೇಶ ಸರ್ಕಾರದ ಯೋಜನೆ, ಕಾರ್ಯಕ್ರಮ, ತೋಟಗಾರಿಕೆ ಉತ್ಪನ್ನ ಹಾಗೂ ಮಾರುಕಟ್ಟೆಯಲ್ಲಿ ರೈತರಿಗೆ ಬೆಂಬಲ ಬೆಲೆ ಸಿಗಬೇಕು ಎಂಬುದು ಮುಖ್ಯ ಉದ್ದೇಶವಾಗಿದೆ ಎಂದರು.ಜಿಲ್ಲೆಯ ರೈತರ ಖಾತೆಗೆ ಸುಮಾರು 450 ಕೋಟಿ ರೂ. ಜಮೆ: ಕಳೆದ ವರ್ಷದಲ್ಲಾದ ಅತೀವೃಷ್ಟಿಯಿಂದ 1.65 ಲಕ್ಷ ಹೆಕ್ಟೇರ್ ಬೆಳೆಹಾನಿಯಾಗಿ ರೈತರು ಸಂಕಷ್ಟದಲ್ಲಿದ್ದರು, ಆದರೆ ಸರಕಾರವು ಕಾಳಜಿ ವಹಿಸಿ ಹೆಚ್ಚಿನ ಪರಿಹಾರ ಒದಗಿಸಿದೆ. ಒಟ್ಟು 288 ಕೋಟಿ ರೂಪಾಯಿ 1.92 ಲಕ್ಷ ರೈತರ ಖಾತೆಗೆ ನೇರವಾಗಿ ಜಮೆ ಆಗಿದೆ. ಇದಕ್ಕೆ ಅನುಗುಣವಾಗಿ ಬೆಳೆ ಕಟಾವು ಪ್ರಯೋಗ ಮಾಡಿಸಿ ಈಗಾಗಲೇ 100 ಕೋಟಿ ರೂ. ಬೆಳೆವಿಮೆ ಹಣ ಜಮೆ ಆಗಿದ್ದು, ಇನ್ನು 50 ಕೋಟಿ ರೂ. ಬೆಳೆ ವಿಮೆ ಬರಲಿದೆ. ಒಟ್ಟು 450 ಕೋಟಿ ರೂ. ಜಿಲ್ಲೆಯ ರೈತರ ಖಾತೆಗೆ ನೇರವಾಗಿ ಹಣ ಜಮೆ ಆಗಿದೆ ಎಂದು ಸಚಿವರು ತಿಳಿಸಿದರು. ರೈತರ ಬೆಳೆಗಳಿಗೆ ಉತ್ತಮ ಮಾರುಕಟ್ಟೆ ಬೆಲೆ ದೊರೆಯಬೇಕು, ರೈತರು ಸಹ ವಿವಿಧ ಬೆಳೆಗಳನ್ನು ಬೆಳೆಯಬೇಕೆಂದರು. ಎಲ್ಲೆಡೆ ಮಾಲಿನ್ಯ ಕಂಡುಬರುತ್ತಿದೆ. ಮಣ್ಣಿನಲ್ಲಿ, ಬೆಳೆಗಳಲ್ಲಿ ರಸಾಯನಿಕಗಳ ಪ್ರಮಾಣ ಹೆಚ್ಚುತ್ತಿದೆ. ರೈತರು ಹೆಚ್ಚು ಸಿರಿಧಾನ್ಯ ಬೆಳೆಯಬೇಕಿದೆ. ಜಿಲ್ಲೆಯಲ್ಲಿ ಕಾರಂಜಾ, ಮೇಕರ ನೀರಾವರಿ ಚಾಲ್ತಿಯಲ್ಲಿದೆ. ಔರಾದ್ ಕೆರೆಗಳನ್ನು ತುಂಬಿಸಲಾಗುವುದು, ಒಟ್ಟಾರೆ ರೈತರ ಅಭಿವೃದ್ಧಿಗೆ ತಾವು ಬದ್ಧರಿದ್ದೇವೆ ಎಂದು ಸಚಿವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ್ ಬದೋಲೆ ಪ್ರಾಸ್ತಾವಿಕವಾಗಿ ಮಾತನಾಡಿ, ಉದ್ಯೋಗ ಮೇಳದಲ್ಲಿ 32 ವಿವಿಧ ಕಂಪನಿಗಳು ಭಾಗವಹಿಸಿವೆ, ಉದ್ಯೋಗಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಕೊಳ್ಳಲು ಎನ್.ಆರ್.ಎಲ್.ಎಮ್ ಯೋಜನೆಯಿಂದ ಜಿ.ಪಿ.ಎಲ್.ಎಫ್ ಗಳ ಮೂಲಕ ಗ್ರಾಮಗಳಲ್ಲಿ ಪ್ರಚಾರ ನಡೆಸಿ ನೊಂದಣಿಗಾಗಿ ಆನ್‌ಲೈನ್ ಲಿಂಕ್‌ನಲ್ಲಿ ಅವಕಾಶ ನೀಡಲಾಗಿದೆ, ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಕೊಂಡು ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.
ಇದೇ ಸಂದರ್ಭದಲ್ಲಿ ಮೇಳದ ಅಂಗವಾಗಿ ಕೃಷಿ, ತೋಟಗಾರಿಕೆ, ಮೀನುಗಾರಿಕೆ, ಗ್ರಾಮೀಣಾಭಿವೃದ್ಧಿ, ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಖಾಸಗಿ ಸಂಸ್ಥೆಗಳು ಸ್ಥಾಪಿಸಿದ 49 ಮಳಿಗೆಗಳಿಗೆ ಸಚಿವರು ಭೇಟಿ ನೀಡಿ ವೀಕ್ಷಣೆ ನಡೆಸಿದರು. ವೇದಿಕೆ ಕಾರ್ಯಕ್ರಮ ಚಾಲನೆಗೂ ಮುನ್ನ ನಗರದ ಛತ್ರಪತಿ ಶಿವಾಜಿ ವೃತ್ತದಿಂದ ನೆಹರು ಕ್ರೀಡಾಂಗಣ ವರೆಗೆ ನಡೆದ ಸಿರಿಧಾನ್ಯ ನಡಿಗೆ ಮೆರವಣಿಗೆಗೆ ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಚಾಲನೆ ನೀಡಿದರು, ಮೆರವಣಿಗೆಯಲ್ಲಿ ಸಿರಿಧಾನ್ಯ



ಹೊತ್ತ ಮಹಿಳೆಯರು ಗಮನ ಸೆಳೆದರು.
ಈ ಸಂದರ್ಭದಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬಾಬು ಹೊನ್ನನಾಯ್ಕ, ಅಧ್ಯಕ್ಷರು ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ)ಭೀಮರಾಯನಗುಡಿ ಕಲಬುರಗಿ, ಬೀದರ ಕೃಷಿಕ ಸಮಾಜದ ಜಿಲ್ಲಾಧ್ಯಕ್ಷರಾದ ಸಿದ್ರಾಮಯ್ಯಾ ಸ್ವಾಮಿ, ವಿಶ್ವನಾಥ ಪಾಟೀಲ ಮಾಡಗೊಳ, ರಾಜ್ಯ ಪ್ರತಿನಿಧಿ, ಕರ್ನಾಟಕ ಪ್ರದೇಶ ಕೃಷಿಕ ಸಮಾಜ, ಬೆಂಗಳೂರು, ಹಣಮಂತ ಚೌಹಾಣ್, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಬೀದರ ಮಹಾನಗರ ಪಾಲಿಕೆಯ ಆಯುಕ್ತರಾದ ಮುಕುಲ್ ಜೈನ, ಜಂಟಿ ಕೃಷಿ ನಿರ್ದೇಶಕರಾದ ದೇವಿಕಾ, ಮೀನುಗಾರಿಕೆ ಉಪ ನಿರ್ದೇಶಕರಾದ ಜಾನವಿ ಸೇರಿದಂತೆ ಅನೇಕ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

# ರಾಜ್ಯದ ಬಹುತೇಕ ಜಲಾಶಯಗಳಲ್ಲಿ ನೀರಿನ ಸಂಗ್ರಹ ಕುಸಿತ, ಬೇಸಿಗೆ ಆರಂಭಕ್ಕೂ ಮುನ್ನ ಬಿಗ್ ಶಾಕ್..!

**ಬೆಂಗಳೂರು,ಫೆ.23–** ಕಳೆದ ವರ್ಷ ರಾಜ್ಯದಲ್ಲಿ ನಿರೀಕ್ಷೆಗೂ ಮೀರಿ ಮಳೆಯಾದ್ದರಿಂದ ರಾಜ್ಯದ ಬಹುತೇಕ ಎಲ್ಲಾ ಜಲಾಶಯಗಳು ಅವಧಿಗೂ ಮುನ್ನವೇ ತುಂಬಿದ ಪರಿಣಾಮ ಜನಜಾನುವಾರುಗಳಿಗೆ ಯಾವುದೇ ಕೊರತೆಯಾಗುವುದಿಲ್ಲ ಎಂಬ ಭರವಸೆಯಿತ್ತು. ಆದರೆ ವಾಸ್ತವ ಬೇರೆಯೇ ಇದೆ.

ರಾಜ್ಯದ 13 ಪ್ರಮುಖ ಅಣೆಕಟ್ಟುಗಳ ಪೈಕಿ ಹತ್ತು ಜಲಾಶಯಗಳಲ್ಲಿ ಈಗ ಹಿಂದಿನ ವರ್ಷಕ್ಕಿಂತ ಕಡಿಮೆ ನೀರು ಸಂಗ್ರಹವಾಗಿದೆ. ಹೆಚ್ಚುತ್ತಿರುವ ತಾಪಮಾನದಿಂದಾಗಿ ಅಣೆಕಟ್ಟುಗಳಿಂದ ನೀರು ಆವಿಯಾಗುವಿಕೆ ಇದಕ್ಕೆ ಪ್ರಮುಖ ಕಾರಣವಾಗಿದೆ, ಅತಿಯಾದ ಬಳಕೆ ಅಂತರ್ಜಲದ ಮೇಲೂ ಪರಿಣಾಮ ಬೀರಿದೆ.

ಈ ಬೇಸಿಗೆಯಲ್ಲಿ ರಾಜ್ಯದ ಕೆಲವು ಭಾಗಗಳಲ್ಲಿ ಕುಡಿಯುವ ನೀರು ಕಳವಳಕಾರಿಯಾಗಬಹುದು ಎಂದು ತಜ್ಞರು ಎಚ್ಚರಿಸಿದ್ದಾರೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರದ (ಕೆಎಸ್‌ಎನ್‌ಡಿಎಂಸಿ) ಮಾಹಿತಿಯ ಪ್ರಕಾರ, 2025ರಲ್ಲಿ ಎಲ್ಲಾ 13 ಅಣೆಕಟ್ಟುಗಳಲ್ಲಿ ನೀರಿನ ಸಂಗ್ರಹವು 535 ಸಾವಿರ ಮಿಲಿಯನ್ ಘನ ಅಡಿ (ಟಿಎಂಸಿ) ಆಗಿತ್ತು, ಆದರೆ ಈಗ ಅದು 493 ಟಿಎಂಸಿಎಫ್‌ಟಿ ಆಗಿದೆ, 42 ಟಿಎಂಸಿವ ವ್ಯತ್ಯಾಸವಾಗಿದೆ.

ಬೇಸಿಗೆಯಲ್ಲಿ ಹೆಚ್ಚುತ್ತಿರುವ ಬಿಸಿಲಿನ ತಾಪದಿಂದಾಗಿ ಜಲಾಶಯಗಳು, ಕೆರೆ–ಕಟ್ಟೆಗಳಲ್ಲಿ ನೀರಿನ ಮಟ್ಟ ಗಣನೀಯವಾಗಿ ಕುಸಿಯುತ್ತಿದ್ದು, ಕುಡಿಯುವ ನೀರಿಗೆ ತೀವ್ರ ಅಭಾವ ಸೃಷ್ಟಿಯಾಗಿದೆ. ಹವಾಮಾನ ಬದಲಾವಣೆ, ಅಸಮರ್ಪಕ ಮಳೆ ಮತ್ತು ಬತ್ತಿ ಹೋಗುತ್ತಿರುವ ಅಂತರ್ಜಲ ಮಟ್ಟದಿಂದಾಗಿ ಈ ಸಮಸ್ಯೆ ಜಟಿಲವಾಗಿದೆ. ಬೆಂಗಳೂರಿನಂತಹ ನಗರಗಳಲ್ಲಿ ಪರ್ಯಾಯ ನೀರಿನ ಮೂಲಗಳ ಹುಡುಕಾಟ ಮತ್ತು ಜಲ ಸಂರಕ್ಷಣೆ ಅತ್ಯಗತ್ಯವಾಗಿದೆ.

2025ನೇ ಸಾಲು ಕರ್ನಾಟಕಕ್ಕೆ ಹವಾಮಾನದ ವಿಚಾರದಲ್ಲಿ ಅತ್ಯಂತ ಉತ್ತಮ ವರ್ಷವಾಗಿತ್ತು. ರಾಜ್ಯದಲ್ಲಿ ಉತ್ತಮ ಮಳೆಯಿಂದಾಗಿ ಯಾವುದೇ ಸಮಸ್ಯೆ ಆಗಿರಲಿಲ್ಲ. ಆದರೆ 2023–




2024ನೇ ಸಾಲಿನಲ್ಲಿ ಮಳೆ ಆಗದೆ ಸಮಸ್ಯೆ ಹೆಚ್ಚಾಗಿತ್ತು. ತಾಪಮಾನವೂ ಹೆಚ್ಚಳವಾಗಿತ್ತು. ಇದೀಗ 2026ನೇ ಸಾಲಿನಲ್ಲೂ ಇದೇ ಪರಿಸ್ಥಿತಿ ಎದುರಾಗುವ ಆತಂಕ ಶುರುವಾಗಿದೆ.

ಕರ್ನಾಟಕದಲ್ಲಿ ಈ ಬಾರಿ ಭಾರೀ ಬಿಸಿಲು ಇರಲಿದೆ. ಅಲ್ಲದೇ ಈ ಬಾರಿಯ ಬೇಸಿಗೆಯ ಸಮಯದಲ್ಲಿ ಗರಿಷ್ಠ ತಾಪಮಾನವು ಹೆಚ್ಚಳವಾಗಿದೆ.ಬೆಂಗಳೂರು ಸೇರಿದಂತೆ ಕರ್ನಾಟಕದ ವಿವಿಧ ಪ್ರದೇಶಗಳಲ್ಲಿ ಗರಿಷ್ಠ ತಾಪಮಾನ / ಬಿಸಿಲಿ ಪ್ರಮಾಣವು ಸರಾಸರಿಗಿಂತ 1–3 ಡಿಗ್ರಿ ಸೆಲ್ಸಿಯಸ್ ಹೆಚ್ಚಳವಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿದೆ.

2026ನೇ ಸಾಲಿನ ಬೇಸಿಗೆಯಲ್ಲಿ ಬಿಸಿಲ ತೀವ್ರತೆಯು ಹೆಚ್ಚಾಗಿರುವ ಸಾಧ್ಯತೆ ಇದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಉಷ್ಣಾಂಶವು ಸರಾಸರಿಗಿಂತ 1 ರಿಂದ 3 ಡಿಗ್ರಿ ಸೆಲ್ಸಿಯಸ್‌ನಷ್ಟು ಹೆಚ್ಚಿರಲಿದೆ ಎಂದು ಹವಾಮಾನ ತಜ್ಞರು ಮುನ್ಸೂಚನೆ ನೀಡಿದ್ದಾರೆ.

ಈಚೆಗೆ ರಾಜ್ಯದಲ್ಲಿ ಮಳೆಯಾಗದೆ ಬಿಸಿಲಿನ ಪ್ರಮಾಣ ಹೆಚ್ಚಳವಾದ ಸಂದರ್ಭದಲ್ಲಿ ನೀರಿನ ಅಭಾವವೂ ಎದುರಾಗಿತ್ತು. ನೀರಿನ ಸಮಸ್ಯೆಯಿಂದ ಬೆಂಗಳೂರು ಸೇರಿದಂತೆ ಕರ್ನಾಟಕದ ಜನ ಹೈರಾಣಾಗಿದ್ದರು. ಇದೀಗ 2026ರಲ್ಲೂ ಅದೇ ಪರಿಸ್ಥಿತಿ ಮರುಕಳಿಹಿಸುವ ಸಾಧ್ಯತೆ ದಟ್ಟವಾಗಿದೆ.

ಕಳೆದ ವರ್ಷ ತುಂಗಭದ್ರಾ ಅಣೆಕಟ್ಟೆಯಲ್ಲಿ ಸುಮಾರು 40 ಟಿಎಂಸಿ ಅಡಿ ನೀರು ಇದ್ದು, ಈಗ ಅದು 24 ಟಿಎಂಸಿಗೆ ಇಳಿದಿದೆ. ಅದೇ ರೀತಿ, ಲಿಂಗನಮಕ್ಕಿ ಅಣೆಕಟ್ಟೆಯಲ್ಲಿ ಈಗ 87 ಟಿಎಂಸಿ ಇದೆ. ಕಳೆದ ವರ್ಷ 78 ಟಿಎಂಸಿ ಇದೆ. ಸೂಪಾ ಅಣೆಕಟ್ಟಿನ ನೀರಿನ ಮಟ್ಟ 82 ಟಿಎಂಸಿ ಯಿಂದ 77 ಅಡಿಗೆ ಇಳಿದಿದೆ. ಕೃಷ್ಣರಾಜ ಜಲಾಶಯದಲ್ಲಿ ಸ್ವಲ್ಪ ಹೆಚ್ಚಳವಾಗಿದೆ. ಕಳೆದ ವರ್ಷ ಇದು 37.88 ಟಿಎಂಸಿಎಫ್‌ಟಿ ಇತ್ತು, ಈಗ ಅದು 38.64 ಟಿಎಂಸಿ ಆಗಿದೆ. 13 ಅಣೆಕಟ್ಟುಗಳಲ್ಲಿ ಒಟ್ಟು ಸಾಮರ್ಥ್ಯ 895.07 ಟಿಎಂಸಿ ಅಡಿಯಿದೆ. ಆದರೆ ಸದ್ಯ 493.91 ಟಿಎಂಸಿ ಅಡಿಯಿದೆ. ಅಂದರೆ ಸಾಮರ್ಥ್ಯದ ಶೇ.45ರಷ್ಟು ಮಾತ್ರ ನೀರು ಸಂಗ್ರಹವಾಗಿದೆ.ಕಳೆದ ವರ್ಷ ಕ್ರೆಸ್ಟ್ ಗೇಟ್‌ಗಳು ಮುರಿದು ನೀರು ನಷ್ಟವಾದ ಕಾರಣ ತುಂಗಭದ್ರಾ ಅಣೆಕಟ್ಟಿನಲ್ಲಿ ನೀರನ್ನು ಸಂಗ್ರಹಿಸಲು ಸಾಧ್ಯವಿಲ್ಲ. ಜಲಾನಯನ ಪ್ರದೇಶಗಳಲ್ಲಿ ಉತ್ತಮ ಮಳೆಯಾಗಿದ್ದರೂ, ಜಲಾಶಯವು ಅದರಲ್ಲಿ ಶೇ.70ರಷ್ಟು ಮಾತ್ರ ಸಂಗ್ರಹಿಸಲು ಸಾಧ್ಯವಾಯಿತು ಎಂದು ಹೇಳಿದ್ದಾರೆ. ಕುಡಿಯುವ ನೀರಿನ ಅಗತ್ಯಗಳೇ ಆದ್ಯತೆಯಾಗಿರುವುದರಿಂದ ರೈತರು ಕೃಷಿ ಜಮೀನುಗಳಿಗೆ ನೀರು ಸರಬರಾಜು ಮಾಡದೆ ತೀವ್ರ ಸಂಕಷ್ಟದಲ್ಲಿದ್ದಾರೆ ಎಂದು ನೀರಾವರಿ ಇಲಾಖೆಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ನೀರಿನ ನಷ್ಟದ ಬಗ್ಗೆ ವಿವರಿಸಿದ ರೆಡ್ಡಿ, ಹೆಚ್ಚುತ್ತಿರುವ ತಾಪಮಾನವು ನೀರು ಆವಿಯಾಗಲು ಕಾರಣವಾಗುತ್ತಿದೆ. ಕೃಷಿಗೆ ಹೆಚ್ಚಿನ ನೀರಿನ ಅಗತ್ಯವಿರುತ್ತದೆ. ಏಕೆಂದರೆ ಸಸ್ಯಗಳು ಹೆಚ್ಚಿನ ನೀರನ್ನು ಬಯಸುತ್ತವೆ. ಅಂತರ್ಜಲದ ತೀವ್ರ ಬಳಕೆಯಿಂದಾಗಿ 43 ತಾಲ್ಲೂಕುಗಳು ಈಗಾಗಲೇ ನೀರಿನ ಬಿಕ್ಕಟ್ಟನ್ನು ಎದುರಿಸುತ್ತಿವೆ ಎಂದು ವಿಪತ್ತು ನಿರ್ವಹಣಾ ಘಟಕಗದ ಮೂಲಗಳು ತಿಳಿಸಿವೆ.

ಜನರಿಗೆ ಕಡಿಮೆ ನೀರನ್ನು ಬಳಸುವಂತೆ ಮತ್ತು ಅಮೂಲ್ಯವಾದ ನೀರನ್ನು ವ್ಯರ್ಥ ಮಾಡದಂತೆ ಮನವಿ ಮಾಡಿದ್ದು, ಕುಡಿಯುವ ನೀರು ಆದ್ಯತೆಯಾಗಿರುವುದರಿಂದ, ನೀರನ್ನು ಇತರ ಉದ್ದೇಶಗಳಿಗಾಗಿ ಬಳಸಬಾರದು ಎಂದು ತಜ್ಞರು ಸಲಹೆ ನೀಡಿದ್ದಾರೆ

## ಬೆಂಗಳೂರಲ್ಲಿ ಶಾಲೆಗಳ ಸುತ್ತಮುತ್ತ ಅನಾಮಿಕರು ಓಡಾಟ, ಆತಂಕದಲ್ಲಿ ಪೋಷಕರು..!



**ಬೆಂಗಳೂರು, ಫೆ.23–** ನಗರದ ಪ್ರತಿಷ್ಠಿತ ಖಾಸಗಿ ಶಾಲೆಗಳ ಸುತ್ತಮುತ್ತ ಅನಾಮಿಕರ ಓಡಾಟ ಕಂಡುಬರುತ್ತಿರುವುದು ಪೋಷಕರು ಹಾಗೂ ಶಿಕ್ಷಕರ ಆತಂಕಕ್ಕೆ ಕಾರಣವಾಗಿದೆ. ಅನಾಮಿಕರ ಓಡಾಟದ ಶಂಕೆ ವ್ಯಕ್ತವಾಗುತ್ತಿದ್ದಂತೆ ಶಾಲಾ ನಿರ್ವಹಣಾ ಮಂಡಳಿಗಳು ಎಚ್ಚೆತ್ತುಕೊಂಡಿವೆ. ಕೆಲವು ಶಾಲೆಗಳು ಪೋಷಕರಿಗೆ ಸಲಹಾ ಪತ್ರ ಕಳುಹಿಸಿ, ಮಕ್ಕಳ ಸುರಕ್ಷತೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಮನವಿ ಮಾಡಿಕೊಂಡಿವೆ.

ಖಾಸಗಿ ಶಾಲೆಗಳ ಸುತ್ತ ಅಪರಿಚಿತರ ಸಂಚರಣೆ ಬಗ್ಗೆ ಶಂಕೆಮಕ್ಕಳಿಗೆ ಚಾಕಲೇಟ್ ಅಥವಾ ಉಡುಗೊರೆ ನೀಡಿ ಹತ್ತಿರವಾಗಲು ಯತ್ನಗಳು ನಡೆಯುತ್ತಿವೆ.ಶಾಲೆ ಬಿಡುವ ಸಮಯದಲ್ಲಿ ಅನುಮಾನಾಸ್ಪದ ವ್ಯಕ್ತಿಗಳ ಹಾಜರಿ ಕಂಡು ಬಂದಿದೆ. ಕೆಲವು ಕಡೆ ಪೋಷಕರಿಗೆ ಮುನ್ನೆಚ್ಚರಿಕಾ ಸೂಚನೆ ನೀಡಲಾಗಿದೆ ಎಂದು ಖಾಸಗಿ ಶಾಲೆಗಳ ಒಕ್ಕೂಟದ ಪ್ರಾಧನ ಕಾರ್ಯದರ್ಶಿ ಶಶಿಕುಮಾರ್ ಮಾಹಿತಿ ನೀಡಿದ್ದಾರೆ.

ಖಾಸಗಿ ಶಾಲೆಗಳ ಒಕ್ಕೂಟದಡಿ ಕಾರ್ಯನಿರ್ವಹಿಸುವ ಕ್ಯಾಮ್ಸ್‌ಸಂಸ್ಥೆಯ ಸೂಚನೆ ಮೇರೆಗೆ ಹಲವು ಶಾಲೆಗಳಲ್ಲಿ ಮಾಕ್ ಡ್ರಿಲ್ ಆರಂಭವಾಗಿದೆ.ಮಾಕ್ ಡ್ರಿಲ್‌ನಲ್ಲಿ ಅಪರಿಚಿತರೊಂದಿಗೆ ಮಾತನಾಡಬಾರದು. ಯಾರಾದರೂ ಚಾಕಲೇಟ್. ಉಡುಗೊರೆ ಕೊಟ್ಟರೆ ತಕ್ಷಣ ಶಿಕ್ಷಕರಿಗೆ ತಿಳಿಸಬೇಕು.ಪೋಷಕರ ಹೊರತು ಬೇರೆ ಯಾರ ಜೊತೆಗೆ ಹೋಗಬಾರದು.ಅನುಮಾನಾಸ್ಪದ ಘಟನೆ ಕಂಡರೆ ತಕ್ಷಣ ಶಾಲಾ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಸೂಚಿಸಲಾಗಿದೆ.

ಮಕ್ಕಳಿಗೆ ಸರಳವಾಗಿ ಹಾಗೂ ಉದಾಹರಣೆಗಳ ಮೂಲಕ ಅಪಾಯದ ಅರಿವು ಮೂಡಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಇನ್ನೂ ಪೋಷಕರಿಗೆ ಮಕ್ಕಳಿಗೆ ಗುಡ್ ಟಚ್ ಬ್ಯಾಡ್ ಟಚ್ ಅರಿವು ಕಲಿಸಬೇಕು, ಶಾಲೆಯಿಂದ ಮನೆಗೆ ಬರುವ ಸಮಯದಲ್ಲಿ ಗಮನ ವಹಿಸಬೇಕು, ಅಪರಿಚಿತರೊಂದಿಗೆ ಮಾತನಾಡಬಾರದು ಎಂಬುದನ್ನು ಮತ್ತೆ ಮತ್ತೆ ಹೇಳಬೇಕು, ಶಾಲಾ ಐಡಿ ಕಾರ್ಡ್ ಕಡ್ಡಾಯವಾಗಿ ಧರಿಸಲು ಸೂಚಿಸಬೇಕು ಎಂದು ಪೋಷಕರಿ ತಿಳಿಹೇಳಲಾಗಿದೆ.

ಪೊಲೀಸ್ ಇಲಾಖೆಶಾಲೆಗಳ ಸುತ್ತ ಪ್ಯಟ್ರೋಲಿಂಗ್ ಹೆಚ್ಚಿಸುವಂತೆ ಸ್ಥಳೀಯ ಪೊಲೀಸ್ ಠಾಣೆಗಳಿಗೆ ಮನವಿ ಮಾಡಲಾಗಿದೆ. ಯಾವುದೇ ಅನುಮಾನಾಸ್ಪದ ವ್ಯಕ್ತಿ ಕಂಡುಬಂದರೆ ತಕ್ಷಣ ಮಾಹಿತಿ ನೀಡುವಂತೆ ಸೂಚನೆ ನೀಡಲಾಗಿದೆ.ಶಾಲೆಗಳ ಸುರಕ್ಷತೆ ಕುರಿತು ಹೆಚ್ಚುತ್ತಿರುವ ಆತಂಕದ ನಡುವೆ, ಮುನ್ನೆಚ್ಚರಿಕೆ ಕ್ರಮಗಳೇ ಮಕ್ಕಳ ಭದ್ರತೆಗೆ ಮೊದಲ ಹೆಜ್ಜೆ ಎಂಬ ಸಂದೇಶವನ್ನು ಶಾಲಾ ನಿರ್ವಹಣೆ ಮತ್ತು ಪೋಷಕರು ಒತ್ತಿ ಹೇಳುತ್ತಿದ್ದಾರೆ.

## ಮೌಲ್ಯ ಶಿಕ್ಷಣ ಪುಸ್ತಕಕ್ಕೆ ದೈಹಿಕ ಶಿಕ್ಷಕರ ಸಂಘದ ಅತೃಪ್ತಿ

**ಬೀದರ್: ಫೆ.23:**ಸರ್ಕಾರಿ ಶಾಲೆಗಳ 2026–27ನೇ ಸಾಲಿನ ಪಠ್ಯಕ್ರಮದಲ್ಲಿ ದೈಹಿಕ ಶಿಕ್ಷಣ ಪುಸ್ತಕದ ಬದಲು ಮೌಲ್ಯ ಶಿಕ್ಷಣ ಪುಸ್ತಕ ಅಳವಡಿಸುತ್ತಿರುವುದಕ್ಕೆ ಕರ್ನಾಟಕ ರಾಜ್ಯ ಸರ್ಕಾರಿ ಗ್ರೇಡ್ 1 ದೈಹಿಕ ಶಿಕ್ಷಣ ಶಿಕ್ಷಕರ ಸಂಘ ತೀವ್ರ ಅತೃಪ್ತಿ ಹೊರ ಹಾಕಿದೆ.ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ಈ ಕುರಿತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕರಿಗೆ ಬರೆದ ಮನವಿ ಪತ್ರವನ್ನು ಶನಿವಾರ ಕಚೇರಿ ಅಧೀಕ್ಷಕರಿಗೆ ಸಲ್ಲಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಈಗಾಗಲೇ 1 ರಿಂದ 10ನೇ ತರಗತಿ ಮಕ್ಕಳಿಗೆ ದೈಹಿಕ ಶಿಕ್ಷಣ ಪಠ್ಯ ವಸ್ತು ಒಳಗೊಂಡ ಮೌಲ್ಯ ಶಿಕ್ಷಣ ಹೆಸರಿನ ಪುಸ್ತಕ ಮುದ್ರಿಸಿ ವಿತರಿಸಲು ಆದೇಶಿಸಿದೆ. ಇದರಿಂದ ದೈಹಿಕ ಶಿಕ್ಷಣ ವಿಷಯವನ್ನೇ ಮೌಲ್ಯ ಶಿಕ್ಷಣವಾಗಿ ಮಾರ್ಪಡಿಸುತ್ತಿರುವಂತೆ ಭಾಸವಾಗುತ್ತಿದೆ ಎಂದು ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸಂಜೀವ್ ಬಿ. ಸೂರ್ಯವಂಶಿ ಹೇಳಿದರು.

ಪ್ರೊ.ಎಲ್.ಆರ್. ವೈದ್ಯನಾಥನ್ ಸಮಿತಿಯು 1 ರಿಂದ 10 ನೇ ತರಗತಿ ವರೆಗೆ ದೈಹಿಕ ಶಿಕ್ಷಣ ಕಡ್ಡಾಯಗೊಳಿಸಬೇಕು ಎಂದು 2006 ರಲ್ಲಿ ನೀಡಿದ ವರದಿ ಪರಿಣಾಮ ಧಾರವಾಡದ ಡಾ. ಆನಂದ ನಾಡಗೇರ್ ಅಧ್ಯಕ್ಷತೆಯಲ್ಲಿ ಪಠ್ಯಪುಸ್ತಕ ರಚನಾ ಸಮಿತಿ ರಚಿಸಲಾಗಿತ್ತು. ಬಳಿಕ 6 ರಿಂದ 10ನೇ ತರಗತಿ ವರೆಗೆ ದೈಹಿಕ ಶಿಕ್ಷಣ ಪುಸ್ತಕ ರಚಿಸಿ ಪ್ರತಿ ವರ್ಷ ಶಾಲೆಗಳಿಗೆ ಸರಬರಾಜು ಮಾಡುತ್ತಾ ಬರಲಾಗಿದೆ ಎಂದು ತಿಳಿಸಿದರು.

ಇದೀಗ ಏಕಾಏಕಿ ದೈಹಿಕ ಶಿಕ್ಷಣದ ಅಂಶಗಳನ್ನು ಮೌಲ್ಯ ಶಿಕ್ಷಣ ಪುಸ್ತಕದಲ್ಲಿ ಸೇರಿಸುತ್ತಿರುವುದು ದೈಹಿಕ ಶಿಕ್ಷಕರಲ್ಲಿ ಆತಂಕ ಹಾಗೂ ಗೊಂದಲ ಉಂಟು ಮಾಡಿದೆ ಎಂದು ಹೇಳಿದರು.ದೈಹಿಕ ಶಿಕ್ಷಣ




ಪುಸ್ತಕವು ವಿದ್ಯಾರ್ಥಿಗಳ ಮಾನಸಿಕ, ದೈಹಿಕ ಬೆಳವಣಿಗೆ ಜತೆಗೆ ಕ್ರೀಡಾ ಸಾಧನೆಗೆ ಅವಶ್ಯಕವಾದ ಅಂಶಗಳನ್ನು ಒಳಗೊಂಡಿದೆ. ಕಾರಣ, ದೈಹಿಕ ಶಿಕ್ಷಣ ಅಂಶವನ್ನು ಬೇರೆ ಪುಸ್ತಕದಲ್ಲಿ ಸೇರ್ಪಡೆಗೊಳಿಸದೆ, ದೈಹಿಕ ಶಿಕ್ಷಣ ಪುಸ್ತಕದಲ್ಲೇ ಮೌಲ್ಯ ಶಿಕ್ಷಣ ಸೇರಿಸಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ.

ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ವೆಂಕಟರಾವ್ ಡೊಂಬಾಳೆ, ಖಜಾಂಚಿ ಸಂಜಯ್ ಬಿರಾದಾರ, ಸಂಘಟನಾ ಕಾರ್ಯದರ್ಶಿ ಮಾಜಿದ್ ಅಲಿ, ಜಂಟಿ ಕಾರ್ಯದರ್ಶಿ ಸುಧಾಕರ್ ಪೋಲಕಪಳ್ಳಿ, ಬೀದರ್ ತಾಲ್ಲೂಕು ಅಧ್ಯಕ್ಷ ಕ್ಲೆಮೆಂರಾಜ್, ಉಪಾಧ್ಯಕ್ಷ ವಿಜಯಕುಮಾರ ಮಹೀಂದ್ರಕರ್, ಪ್ರಧಾನ ಕಾರ್ಯದರ್ಶಿ ಹಾಜಿಸಾಬ್, ಸಂಘಟನಾ ಕಾರ್ಯದರ್ಶಿ ಗೀತಾ ನಾರಾ, ಜಂಟಿ ಕಾರ್ಯದರ್ಶಿ ಗೋಪಾಲ್ ರೆಡ್ಡಿ, ಲಲಿತಾ, ಶಂಕರರಾವ್ ಪಾಟೀಲ, ಎಂ.ಡಿ. ಶಹಾಬುದ್ದೀನ್, ಶಿವಕುಮಾರ ಖಿಂಡಿ, ಹರಿಪ್ರಸಾದ್ ಕುಲಕರ್ಣಿ ಇದ್ದರು.

## AI ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಅರೆ ಬೆತ್ತಲೆ ಪ್ರತಿಭಟನೆ ನಡೆಸಿದ್ದ ಐದನೇ ಆರೋಪಿ ಅರೆಸ್ಟ್




**ನವದೆಹಲಿ, ಫೆ. 23–** ಕಳೆದ ವಾರ ಇಲ್ಲಿ ನಡೆದ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಭಾರತೀಯ ಯುವ ಕಾಂಗ್ರೆಸ್ ಕಾರ್ಯಕರ್ತರು ಶರ್ಟ್‌ಗಳಿಲ್ಲದೆ ಪ್ರತಿಭಟನೆ ನಡೆಸಿದ್ದಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರು ಐದನೇ ಬಂಧನವನ್ನು ಮಾಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಜಿತೇಂದ್ರ ಯಾದವ್ ಎಂದು ಗುರುತಿಸಲಾದ ಆರೋಪಿಯನ್ನು ಮಧ್ಯಪ್ರದೇಶದ ಗ್ವಾಲಿಯರ್‌ನಲ್ಲಿ ಬಂಧಿಸಲಾಗಿದ್ದು, ಪ್ರಕರಣದಲ್ಲಿ ಒಟ್ಟು ಬಂಧನಗಳ ಸಂಖ್ಯೆ ಐದಕ್ಕೆ ತಲುಪಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಶುಕ್ರವಾರ, ಭಾರತ್ ಮಂಟಪದಲ್ಲಿ ನಡೆದ ಎಐ ಇಂಪ್ಯಾಕ್ಟ್ ಶೃಂಗಸಭೆಯ ಸಂದರ್ಭದಲ್ಲಿ ಭಾರತೀಯ ಯುವ ಕಾಂಗ್ರೆಸ್ (ಐವೈಸಿ) ಕಾರ್ಯಕರ್ತರ ಗುಂಪೊಂದು ಪ್ರದರ್ಶನ ಸಭಾಂಗಣದಲ್ಲಿ ಶರ್ಟ್‌ಗಳಿಲ್ಲದೆ ನಾಟಕೀಯ ಪ್ರತಿಭಟನೆ ನಡೆಸಿತು, ಸರ್ಕಾರ ಮತ್ತು ಭಾರತ–ಯುಎಸ್ ವ್ಯಾಪಾರ ಒಪ್ಪಂದದ ವಿರುದ್ಧ ಘೋಷಣೆಗಳನ್ನು ಹೊಂದಿರುವ ಟಿ–ಶರ್ಟ್‌ಗಳನ್ನು ಹಿಡಿದುಕೊಂಡು ತಿರುಗಾಡಿತು, ನಂತರ ಸ್ಥಳದಲ್ಲಿದ್ದ ಭದ್ರತಾ ಸಿಬ್ಬಂದಿ ಅವರನ್ನು ಕರೆದೊಯ್ದರು.

ಪ್ರತಿಭಟನೆಯ ದಿನದಂದು ದೆಹಲಿ ಪೊಲೀಸರು ನಾಲ್ವರು ಐವೈಸಿ ಕಾರ್ಯಕರ್ತರನ್ನು ಬಂಧಿಸಿದ್ದಾರೆ, ಈ ವಿಷಯದಲ್ಲಿ ವ್ಯಾಪಕವಾದ ಪಿತೂರಿ ಕೋನವು ತನಿಖೆಯಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ವಿಷಯವು ರಾಜಕೀಯ ಜಗಳಕ್ಕೆ ಕಾರಣವಾಯಿತು, ಬಿಜೆಪಿ ಇದನ್ನು ಜಾಗತಿಕ ವೇದಿಕೆಯಲ್ಲಿ ಭಾರತದ ಪ್ರತಿಷ್ಠೆಯನ್ನು ಕೆಡಿಸುವ ನಾಚಿಕೆಗೇಡಿನ ಕೃತ್ಯ ಎಂದು ಕರೆದಿದೆ ಮತ್ತು ಐವೈಸಿ ಇದನ್ನು ರಾಷ್ಟ್ರೀಯ ಹಿತಾಸಕ್ತಿಗಳನ್ನು ಕಾಪಾಡುವ ಗುರಿಯನ್ನು ಹೊಂದಿರುವ ಶಾಂತಿಯುತ ಪ್ರದರ್ಶನ ಎಂದು ಸಮರ್ಥಿಸಿಕೊಂಡಿದೆ.ಪೊಲೀಸರ ಪ್ರಕಾರ, ಐವೈಸಿ ಕಾರ್ಯಕರ್ತರು ಶುಕ್ರವಾರ ಹಾಲ್ ಸಂಖ್ಯೆ 5 ರ ಲಾಬಿ ಪ್ರದೇಶವನ್ನು ಪ್ರವೇಶಿಸಿ ತಮ್ಮ ಶರ್ಟ್‌ಗಳ ಕೆಳಗೆ ಧರಿಸಿದ್ದ ಟಿ–ಶರ್ಟ್‌ಗಳನ್ನು ತೆಗೆದು ಘೋಷಣೆಗಳನ್ನು ಕೂಗಿದರು.

ಪೊಲೀಸರ ಪ್ರಕಾರ, ಪ್ರತಿಭಟನಾಕಾರರು ಸ್ಥಳಕ್ಕೆ ಪ್ರವೇಶಿಸಲು ಕ್ಯೂಆರ್ ಕೋಡ್‌ಗಳನ್ನು ಪಡೆಯಲು ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಂಡಿದ್ದಾರೆ ಎನ್ನಲಾಗಿದೆ. ಆರೋಪಿಗಳು ಆರಂಭದಲ್ಲಿ ಕಪ್ಪು ಛತ್ರಿಗಳ ಮೇಲೆ ಮುದ್ರಿತ ಸ್ಟಿಕ್ಕರ್‌ಗಳನ್ನು ಅಂಟಿಸಿ ಭಾರತ್ ಮಂಟಪದೊಳಗೆ ನುಸುಳಲು ಯೋಜಿಸಿದ್ದರು.ಆದಾಗ್ಯೂ, ನಂತರ ಕಪ್ಪು ಛತ್ರಿಗಳು ಗೇಟ್‌ಗಳನ್ನು ನಿರ್ವಹಿಸುವ ಭದ್ರತಾ ಸಿಬ್ಬಂದಿಯ ಗಮನವನ್ನು ಸೆಳೆಯಬಹುದು ಎಂದು ಅವರು ಭಾವಿಸಿದರು, ಆದ್ದರಿಂದ ಅವರು ತಮ್ಮ ಯೋಜನೆಯನ್ನು ಬದಲಾಯಿಸಿದರು ಮತ್ತು ಟಿ–ಶರ್ಟ್‌ಗಳ ಮೇಲೆ ಮುದ್ರಿತ ಸ್ಟಿಕ್ಕರ್‌ಗಳನ್ನು ಇರಿಸಿಕೊಂಡು ಅವುಗಳನ್ನು ತಮ್ಮ ಶರ್ಟ್‌ಗಳ ಕೆಳಗೆ ಧರಿಸಿದರು ಎಂದು ಮೂಲವೊಂದು ತಿಳಿಸಿದೆ.

ಒಳಗೆ ಹೋದ ನಂತರ, ಪ್ರಧಾನಿ ರಾಜಿ ಮಾಡಿಕೊಂಡಿದ್ದಾರೆ, ಭಾರತ–ಯುಎಸ್ ವ್ಯಾಪಾರ ಒಪ್ಪಂದ ಮತ್ತು ಎಪ್ಸ್ಟಿನ್ ಫೈಲ್ಸ್ ಎಂದು ಬರೆದಿರುವ ಘೋಷಣೆ–ಮುದ್ರಿತ ಟಿ–ಶರ್ಟ್‌ಗಳ ಮೇಲೆ ಧರಿಸಿದ್ದ ಶರ್ಟ್‌ಗಳನ್ನು ತೆಗೆದುಹಾಕಿದ ನಂತರ ಅವರು ಘೋಷಣೆಗಳನ್ನು ಕೂಗಿದರು.

ಪ್ರತಿಭಟನಾಕಾರರು ಕರ್ತವ್ಯದಲ್ಲಿದ್ದ ಕೆಲವು ಪೊಲೀಸ್ ಅಧಿಕಾರಿಗಳ ಮೇಲೂ ಹಲ್ಲೆ ನಡೆಸಿದ್ದಾರೆ ಎಂದು ಮೂಲಗಳು ಹೇಳಿವೆ ಮತ್ತು ಇಡೀ ವಿಷಯ ತನಿಖೆಯಲ್ಲಿದೆ.

ಟಿ–ಶರ್ಟ್‌ಗಳ ಮೇಲೆ ಘೋಷಣೆಗಳನ್ನು ಮುದ್ರಿಸಲು ಯಾರು ಹಣಕಾಸು ಒದಗಿಸಿದರು ಎಂಬುದು ಸೇರಿದಂತೆ ಪ್ರತಿಭಟನೆಯ ಹಿಂದಿನ ಹಣಕಾಸಿನ ಹಾದಿಯನ್ನು ತನಿಖಾಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಐವೈಸಿ ಅಧ್ಯಕ್ಷ ಉದಯ್ ಭಾನು ಚಿಬ್ ಅವರನ್ನು ಈ ಹಿಂದೆ ಪ್ರಶ್ನಿಸಲಾಗಿತ್ತು ಮತ್ತು ಆರೋಪಿಗಳ ವಿಚಾರಣೆಯ ಸಮಯದಲ್ಲಿ ಹೆಚ್ಚಿನ ಹೆಸರುಗಳು ಹೊರಬಂದಿವೆ ಎಂದು ಮೂಲಗಳು ತಿಳಿಸಿವೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಪಂಪನ ವಿಕ್ರಮಾರ್ಜುನ ವಿಜಯಂ ಅದ್ಭುತ ಸಾಹಿತ್ಯ- ವಿದ್ಯಾಸಾಗರರಾವ ಧರ್ಮೇಂದ್ರ ಪೂಜಾರಿ ಬಗ್ಗೂರಿ



**ಹೈದರಾಬಾದ,ಫೆ.23–** ತೆಲಂಗಾಣದ ಮೊದಲ ಕವಿ ಪಂಪನಾಗಿದ್ದು, ಅವರು ವೇಮುಲವಾಡಾದ ಬೋಧನ್ ಪ್ರದೇಶದಲ್ಲಿ ಜನಿಸಿದರು, ಕನ್ನಡ ರಾಜ್ಯಕ್ಕೆ ಹೋಗಿ "ವಿಕ್ರಮಾರ್ಜುನ ವಿಜಯಂ" ನಂತಹ ಅದ್ಭುತ ಸಾಹಿತ್ಯವನ್ನು ರಚಿಸಿದರು ಮತ್ತು ಅವರ ಜನ್ಮಸ್ಥಳ ಬೋಧನ್‌ನಲ್ಲಿ ತಮ್ಮ ಕೊನೆಯ ಗಂಟೆಗಳನ್ನು ಕಳೆದರು ಮತ್ತು ಅವರು ನಿಜವಾದ ತೆಲಂಗಾಣದ ಮಗು ಎಂದು ಮಾಜಿ ರಾಜ್ಯಪಾಲ ಶ್ರೀ ಚೆನ್ನಮನೇನಿ ವಿದ್ಯಾಸಾಗರ್‌ರಾವ್ ಹೇಳಿದರು, ಅವರು ಭಾನುವಾರ "ಅಂತರರಾಷ್ಟ್ರೀಯ ಮಾತೃಭಾಷಾ ದಿನಾಚರಣೆ"ಯ ಸಂದರ್ಭದಲ್ಲಿ, ಬೇಗಂಪೇಟೆ ಎಸ್‌ಇಎಸ್ ಬಿಪಿಆರ್ ವಿಠ್ಠಲ್ ಆಡಿಟೋರಿಯಂನಲ್ಲಿ ಅಕ್ಷರ್ ಯಾನ್, ಅಭಿಜ್ಞ ಭಾರತ್ ಮತ್ತು ಸೀತಾಸ್ ಚಾರಿಟೇಬಲ್ ಟ್ರಸ್ಟ್ ಜಂಟಿಯಾಗಿ ಆಯೋಜಿಸಿದ್ದ ಆಚರಣೆಯಲ್ಲಿ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು.

ಅಂತಹ ಪ್ರತಿಮೆ ಮತ್ತು ವಸ್ತುಸಂಗ್ರಹಾಲಯವನ್ನು ಟ್ಯಾಂಕ್ ಬಂಡ್ ಮೇಲೆ ಸ್ಥಾಪಿಸಿ ತೆಲಂಗಾಣ ಸಾಹಿತ್ಯಕ್ಕೆ ಸಮರ್ಪಿಸಬೇಕು ಎಂದು ಅವರು ಹೇಳಿದರು. ಹನ್ನೊಂದು ನೂರು ವರ್ಷಗಳ ಹಿಂದೆ "ವಿಕ್ರಮಾರ್ಜುನ ವಿಜಯಂ" ಎಂಬ ಸುಂದರ ಕವಿತೆಯನ್ನು ಬರೆದ ಪಂಪನ ಅವರ ಪುಸ್ತಕವನ್ನು ಇಲ್ಲಿಯವರೆಗೆ ಯಾರೂ ತೆಲುಗಿನಲ್ಲಿ ಅನುವಾದಿಸಲು ಸಾಧ್ಯವಾಗಿಲ್ಲ ಮತ್ತು ತೆಲುಗು ಸಾಹಿತ್ಯದ ಇತಿಹಾಸದಲ್ಲಿ ಉಳಿದಿರುವ ಶೂನ್ಯವನ್ನು ಭಾಷಾಶಾಸ್ತ್ರಜ್ಞ ಮತ್ತು ಪ್ರಸಿದ್ಧ ಸಾಹಿತಿ ಜೋಸ್ಯುಲ ಸದಾನಂದ ಶಾಸ್ತ್ರಿ ಅವರ ಪ್ರಯತ್ನದಿಂದ ತುಂಬಲಾಗಿದೆ ಎಂದು ಅವರು ಹೇಳಿದರು, ಅವರು ಅಕ್ಷರಾಯಣ ಸಂಸ್ಥಾಪಕ ಐನಂಪುಡಿ ಶ್ರೀಲಕ್ಷ್ಮಿ ಅವರ ಉಪಕ್ರಮದಿಂದ ಸುಮಾರು ನಾಲ್ಕು ವರ್ಷಗಳ ಕಾಲ ಶ್ರಮಿಸಿ ಈ ಪುಸ್ತಕವನ್ನು ತೆಲುಗಿನಲ್ಲಿ ನಮಗೆ ಪ್ರಸ್ತುತಪಡಿಸಿದರು, ಇದು ತೆಲುಗು ಸಾಹಿತ್ಯ ಮತ್ತು ಅದರ ಇತಿಹಾಸಕ್ಕೆ ಉತ್ತಮ ಸೇರ್ಪಡೆಯಾಗಲಿದೆ. ಮಾತೃಭಾಷೆಯನ್ನು ಮರೆತರೆ, ಇತರ ಭಾಷೆಗಳ ವಿರುದ್ಧ ಪೂರ್ವಾಗ್ರಹ ಪೀಡಿತರಾಗುವ ಅಗತ್ಯವಿಲ್ಲ ಮತ್ತು ಆ ಪ್ರದೇಶದ ಭಾಷೆ ಯಾವುದೇ ಪ್ರದೇಶದ ಜನರಿಗೆ ಮಾತೃಭಾಷೆಯಾಗುತ್ತದೆ, ಆದ್ದರಿಂದ ಎಲ್ಲಾ ಮಾತೃಭಾಷೆಗಳು ಅಭಿವೃದ್ಧಿ ಹೊಂದಬೇಕು ಎಂದು ಅವರು ಹೇಳಿದರು. ನೂರಾರು ವರ್ಷಗಳಿಂದ ತೆಲಂಗಾಣ ಪ್ರದೇಶವು ಎಲ್ಲಾ ಭಾಷೆಗಳ ಮತ್ತು ಎಲ್ಲಾ ಪ್ರದೇಶಗಳ ಜನರ ನೆಲೆಯಾಗಿದೆ ಮತ್ತು ತೆಲಂಗಾಣದ ಜನರು ಎಲ್ಲರನ್ನೂ ಗೌರವಿಸುವ ವಿಶಾಲ ಹೃದಯವನ್ನು ಹೊಂದಿದ್ದಾರೆ ಮತ್ತು ಹೈದರಾಬಾದ್ ನಗರವು ಅದಕ್ಕೆ ಉತ್ತಮ ಉದಾಹರಣೆಯಾಗಿದೆ ಎಂದು ಅವರು ಹೇಳಿದರು. ಅಕ್ಷಯಾನ್ ಸಂಸ್ಥಾಪಕಿ ಶ್ರೀಮತಿ ಐನಂಪುಡಿ ಶ್ರೀಲಕ್ಷ್ಮಿ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾತೃಭೂಮಿ, ಮಾತೃಭೂಮಿ ಮತ್ತು ಮಾತೃಭಾಷೆ ಪ್ರಪಂಚದಾದ್ಯಂತದ ಎಲ್ಲಾ ಜನರಿಗೆ ಸ್ಫೂರ್ತಿಯ ಮೂರು ಶಾಶ್ವತ ಮೂಲಗಳು ಮತ್ತು ಬೋಧನ್‌ನಲ್ಲಿ ಪಂಪನ ನಡೆದಾಡಿದ ನೆಲದಲ್ಲಿ ಜನಿಸಿದ ಅವರು, ತಮ್ಮ ಜನ್ಮಸ್ಥಳಕ್ಕಾಗಿ ಸಾಹಿತ್ಯಿಕವಾಗಿ ಏನಾದರೂ ಮಾಡುವ ಬಯಕೆಯನ್ನು ಹೊಂದಿದ್ದರು ಎಂದು ಹೇಳಿದರು. "ವಿಕ್ರಮಾರ್ಜುನ ವಿಜಯಂ" ಪುಸ್ತಕವನ್ನು ಅನುವಾದಿಸಿದ ಜೋಸ್ಯುಲ ಸದಾನಂದ ಶಾಸ್ತ್ರಿ ಮತ್ತು ಪುರಾವೆಗಳನ್ನು ನೋಡಿದ ವಿದ್ವಾಂಸರಾದ ಗಣೇಶ್, ಹಂಪ ನಾಗರಾಜು ಮತ್ತು ಸುಬ್ರಮಣ್ಯಂ ಕೆಂಡೋಲೆ ಭಾಗವಹಿಸಿದ್ದರು. ಈ ಪುಸ್ತಕದ ಅನುವಾದದಲ್ಲಿ ನೀಡಿದ ಬೌದ್ಧಿಕ ಕೊಡುಗೆ, ಅಂತಹ ಭಾಷಾಶಾಸ್ತ್ರಜ್ಞರೊಂದಿಗೆ ಸಂವಾದಗಳು, ಚರ್ಚೆಗಳು, ಭಾಷಾ ವಿವರಣೆಗಳು ಮತ್ತು ವಿಶ್ಲೇಷಣೆಗಳು ಅನುವಾದಿತ ಪುಸ್ತಕ "ವಿಕ್ರಮಾರ್ಜುನ ವಿಜಯಂ" ಗಿಂತ ಹತ್ತು ಪಟ್ಟು ಹೆಚ್ಚು ಎಂದು ಸದಾನಂದ ಶಾಸ್ತ್ರಿ ನೆನಪಿಸಿದರು. ಕಾವ್ಯ, ಅರ್ಥ ಮತ್ತು ವ್ಯಾಖ್ಯಾನವನ್ನು ಒಳಗೊಂಡಿರುವ ಈ ಪುಸ್ತಕವು 1670 ಪುಟಗಳಲ್ಲಿ ಹರಡಿಕೊಂಡಿದೆ ಮತ್ತು ಅದರ ಪ್ರಕಟಣೆಗೆ ಸಹಾಯ ಮಾಡಿದ್ದಕ್ಕಾಗಿ ಶಾಂತ ವಸಂತ ಟ್ರಸ್ಟ್‌ನ ವರಪ್ರಸಾದ್ ರೆಡ್ಡಿ ಅವರಿಗೆ ಧನ್ಯವಾದ ಅರ್ಪಿಸಿದರು.

ಪುಸ್ತಕ ಬರೆಯುವುದು ಒಂದು ವಿಷಯ, ಅದನ್ನು ಪ್ರಕಟಿಸುವುದು ಇನ್ನೊಂದು ವಿಷಯ ಎಂದು ಹಂಪನಾ ಹೇಳಿದರು. ಈ ಪುಸ್ತಕವನ್ನು ಬರೆಯುವಾಗ ಎದುರಿಸಿದ ಸವಾಲುಗಳು ಮತ್ತು ಸಮಸ್ಯೆಗಳನ್ನು ಹಾಸ್ಯಮಯ ತಿರುವು ಮತ್ತು ಸಮಯೋಚಿತವಾಗಿ ನಿರೂಪಿಸಿದ ಕನ್ನಡ ವಿದ್ವಾಂಸರ ಭಾಷಣಗಳು ತೆಲುಗು ಭಾಷೆಯ ವೈಭವವನ್ನು ಎತ್ತಿ ತೋರಿಸುವ ಕವಿತೆಗಳನ್ನು ಪಠಿಸುತ್ತಾ ಇಡೀ ಪ್ರೇಕ್ಷಕರನ್ನು ಆಕರ್ಷಿಸಿದವು.

ಮಹಾಕವಿ ಪಂಪನ್ ರಾಷ್ಟ್ರೀಯ ಪ್ರಶಸ್ತಿ ಪಡೆದ ಡಾ. ಮಾಮಿಡಿ ಹರಿಕೃಷ್ಣ ಮಾತನಾಡಿ ತೆಲುಗು ಸಾಹಿತ್ಯ ಇತಿಹಾಸದಲ್ಲಿ ತೆಲಂಗಾಣದ ಪಾತ್ರ ವಿಶಿಷ್ಟ ಮತ್ತು ಸಾಮಾನ್ಯವಾಗಿದೆ ಎಂದು ಹೇಳಿದರು, ಆದರೆ ವಿವಿಧ ಕಾರಣಗಳಿಂದಾಗಿ ತೆಲಂಗಾಣ ಸಾಹಿತ್ಯ ವ್ಯಕ್ತಿಗಳು ಮಾಡಿದ ಪ್ರಯತ್ನಗಳು ಮತ್ತು ಪ್ರಗತಿಯನ್ನು ದಾಖಲಿಸಲಾಗಿಲ್ಲ ಎಂಬುದು ವಿಷಾದಕರ, ಪಂಪನ್ ಇದಕ್ಕೆ ಒಂದು ಉದಾಹರಣೆಯಾಗಿದ್ದು, ತೆಲಂಗಾಣ ಸಾಹಿತ್ಯ ಇತಿಹಾಸದ ಯುಗವನ್ನು ಪಂಪನ ಆಧಾರದ ಮೇಲೆ ವಿಭಜಿಸುವ ಅವಶ್ಯಕತೆಯಿದೆ ಎಂದು ಹೇಳಿದರು. ತೆಲಂಗಾಣದ ಬೋಧನ್ ಪ್ರದೇಶದಲ್ಲಿ ಅವರ ಸಮಾಧಿ ಮತ್ತು ಅವರ ಎಲ್ಲಾ ಶಾಸನಗಳನ್ನು ಸಂರಕ್ಷಿಸುವ ಅವಶ್ಯಕತೆಯಿದೆ ಎಂದು ಅವರು ಹೇಳಿದರು. ಈ ಕಾರ್ಯಕ್ರಮದಲ್ಲಿ ಮಾಜಿ ರಾಜ್ಯಪಾಲ ಚೆನ್ನಮನೇನಿ ವಿದ್ಯಾಸಾಗರ್ ರಾವ್ ಅವರು ಭಕ್ತರ ಅಭಿನಂದನೆಗಳ ನಡುವೆ ಮಂಗೋಡಿ ಹರಿಕೃಷ್ಣ ಅವರಿಗೆ ಚಿನ್ನದ ಬಳೆ ಪ್ರದಾನ ಮಾಡಿ ಮಹಾಕವಿ ಪಂಪನ್ ರಾಷ್ಟ್ರೀಯ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಅಂತರಾಷ್ಟ್ರೀಯ ಮಾತೃಭಾಷಾ ದಿನಾಚರಣೆ ಅಂಗವಾಗಿ ಅಕ್ಷಯನ ತೆಲುಗು ಮಹಿಳಾ ಲೇಖಕಿಯರ ಪ್ರತಿಷ್ಠಾನದ ಅಧ್ಯಕ್ಷೆ ಐನಂಪುಡಿ ಶ್ರೀಲಕ್ಷ್ಮಿ, ಅಭಿಜ್ಞಾ ಭಾರತ್ ಸಂಸ್ಥೆ ಡಾ.ದುಂಪ ಶ್ರೀದೇವಿ, ಸೀತಾಸ್ ಚಾರಿಟೇಬಲ್ ಟ್ರಸ್ಟ್ ರಾಣಿ ನಲ್ಲಮೋತು ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯ ಕವಿಗಳು ಮತ್ತು ಕಲಾವಿದರು ಭಾಗವಹಿಸಿದ್ದರು. ತೆಲಂಗಾಣ ಜಾನಪದ ಕಲಾ ತಂಡವು ಭಾಗವಹಿಸಿ ಸಮಾರಂಭಕ್ಕೆ ಹೆಚ್ಚಿನ ಮೆರುಗು ನೀಡಿದವು.

ಡಾ. ವಿಠ್ಠಲ್ ಜೋಶಿಗೆ ಮಹಾಕವಿ ಪಂಪನ ಭಾಷಾ ಸೇವಾ ವಿಶಿಷ್ಟ ಪುರಸ್ಕಾರ

ಹೈದರಾಬಾದ್, ಫೆಬ್ರವರಿ 23: ಅಂತರಾಷ್ಟ್ರೀಯ ಮಾತೃಭಾಷಾ ದಿನದ ಅಂಗವಾಗಿ ಶನಿವಾರ ಬೇಗಂಪೇಟೆಯಲ್ಲಿ ಅಕ್ಷಯನ ಮಹಿಳಾ ಲೇಖಕಿಯರ ಪ್ರತಿಷ್ಠಾನ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾಜಿ ರಾಜ್ಯಪಾಲ ಸಿ.ಎಚ್.ವಿದ್ಯಾಸಾಗರರಾವ್ ಅವರು ಮಹಾಕವಿ ಪಂಪನ ಭಾಷಾ ಸೇವಾ ವಿಶಿಷ್ಟ ಪುರಸ್ಕಾರವನ್ನು ಡಾ. ವಿಠ್ಠಲ ಜೋಶಿ ಅವರಿಗೆ ಪ್ರದಾನ ಮಾಡಿದರು. ಅಕ್ಷಯನ ಮಹಿಳಾ ಲೇಖಕಿಯರ ಪ್ರತಿಷ್ಠಾನದ ಸಂಸ್ಥಾಪಕಿ ಐನಂಪುಡಿ ಶ್ರೀಲಕ್ಷ್ಮಿ ಮಾತನಾಡಿ, ಕನ್ನಡ ಮತ್ತು ತೆಲುಗು ಭಾಷೆಯ ಬೆಳವಣಿಗೆಗೆ ವಿಠ್ಠಲ ಜೋಶಿಯವರ ಸೇವೆಯನ್ನು ಗುರುತಿಸಿ, ಮಹಾಕವಿ ಪಂಪನ ಭಾಷಾ ಸೇವಾ ವಿಶಿಷ್ಟ ಪುರಸ್ಕಾರವನ್ನು ಪ್ರದಾನ ಮಾಡಲಾಯಿತು.

## ಎ.1 ರೋಳಗಾಗಿ ಅಗ್ನಿ ವೀರ ಹುದ್ದೆಗಳ ನೇಮಕಾತಿಗಾಗಿ ಅರ್ಜಿಸಲ್ಲಿಸಿ: ಚೆನ್ನಾರೆಡ್ಡಿ,



**ಮಾನ್ವಿ,ಫೆ.23–**ತಾಲೂಕಿನ ಯುವಕರು ಭಾರತೀಯ ಸೇನೆಗೆ ಸೇರುವ ಆಸಕ್ತಿ ಇದ್ದಲ್ಲಿ 25000ಕ್ಕೂ ಹೆಚ್ಚು ಅಗ್ನಿ ವೀರ ಹುದ್ದೆಗಳ ನೇಮಕಾತಿ ನಡೆಯುತ್ತಿದ್ದು ಎ.1 ರೋಳಗಾಗಿ ಸೇನೆಯ ಅಧಿಕೃತ ವೆಬ್‌ಸೈಟ್www.joinindianarmy.nic.ಇನ್ ಗೆ ಭೇಟಿ ನೀಡಿ ಅಲ್ಲಿ ಅಗ್ನಿಪಥ್ ಟ್ಯಾಬ್ ಕ್ಲಿಕ್ ಮಾಡಿ, ನಿಮ್ಮ ಆಧಾರ್ ಅಥವಾ 10ನೇ ತರಗತಿ ಸರ್ಟಿಫಿಕೇಟ್ ಬಳಸಿ ನೋಂದಣಿ ಮಾಡಿಕೊಳ್ಳಬಹುದಾಗಿದೆ ಅರ್ಜಿ ಶುಲ್ಕ 250ರೂ. ಈ ಬಾರಿಯ ನೇಮಕಾತಿಯಲ್ಲಿ 8ನೇ ತರಗತಿಯಿಂದ ಪಿಯುಸಿ ವರೆಗಿನವರ ನಾಲ್ಕು ವಿಭಾಗಗಳಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದೆ. ಅಗ್ನಿವೀರ್ ಜನರಲ್ ಡ್ಯೂಟಿ 10ನೇ ತರಗತಿಯಲ್ಲಿ ಕನಿಷ್ಠ ಶೇ45 ರಷ್ಟು ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು, ಅಗ್ನಿವೀರ್ ಟೆಕ್ನಿಕಲ್ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣರಾದವರು ಅಥವಾ 10ನೇ ತರಗತಿಯ ಜೊತೆಗೆ ಐಟಿಐ ಮುಗಿಸಿದವರು,ಅಗ್ನಿವೀರ್ ಕ್ಲರ್ಕ್ ಹಾಗೂ ಸ್ಟೋರ್ ಕೀಪರ್ ಯಾವುದೇ ವಿಭಾಗದಲ್ಲಿ ಪಿಯುಸಿ ಯಲ್ಲಿ ಕನಿಷ್ಠ ಶೇ 60 ಅಂಕಗಳನ್ನು ಪಡೆದಿರಬೇಕು. ಇಂಗ್ಲಿಷ್ ಮತ್ತು ಗಣಿತ ವಿಷಯ ಕಡ್ಡಾಯವಾಗಿರುತ್ತದೆ. ಅಗ್ನಿವೀರ್ ಟ್ರೇಡ್ಸ್‌ಮನ್ 8ನೇ ಅಥವಾ 10ನೇ ತರಗತಿ ಉತ್ತೀರ್ಣರಾದವರು ಈ ಹುದ್ದೆಗೆ ಅರ್ಜಿ ಸಲ್ಲಿಸಬಹುದು. ಎರಡು ಹಂತಗಳಲ್ಲಿ ಸಾಮರ್ಥ್ಯದ ಪರೀಕ್ಷೆ ನಡೆಯಲ್ಲಿದು. ಮೊದಲಿಗೆ ಕಂಪ್ಯೂಟರ್ ಆಧಾರಿತ ಲಿಖಿತ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಮುಂದಿನ ಹಂತಕ್ಕೆ ಅವಕಾಶವಿರುತ್ತದೆ. 2 ನೇ ಹಂತದಲ್ಲಿ ನೇಮಕಾತಿ ರ್‍ಯಾಲಿಯಲ್ಲಿ ದೈಹಿಕ ಪರೀಕ್ಷೆ ಇರುತ್ತದೆ. ಕ್ಲರ್ಕ್ ಹುದ್ದೆಯವರಿಗೆ ಟೈಪಿಂಗ್ ಟೆಸ್ಟ್ ಇರುತ್ತದೆ. ಭಾರತ ಸೇನೆಯಲ್ಲಿ ಆಯ್ಕೆಯಾದ ಅಗ್ನಿ ವೀರರಿಗೆ ಆಕರ್ಷಕ ವೇತನ ಮತ್ತು ಸವಲತ್ತುಗಳು, ಸೇವಾ ನಿಧಿ ಪ್ಯಾಕೇಜ್ ಕೂಡ ಲಭ್ಯವಿರುತ್ತದೆ ಹೆಚ್ಚಿನ ಮಾಹಿತಿಗಾಗಿ ದೂ.ಸಂಖ್ಯೆ 9591208111 ಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಮಾಜಿ ಸೈನಿಕರು ಹಾಗೂ ರಾಯಚೂರು. ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಚೆನ್ನಾರೆಡ್ಡಿ, ಪ್ರಕಟಣೆಯಲ್ಲಿ ಕೊರಿದ್ದಾರೆ.

## ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಲು ಮಾರ್ಚ್ 5 ಕೊನೆಯ ದಿನ

**ರಾಯಚೂರು ಫೆ,23–** ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯನ್ನು ಮಾರ್ಚ್ 05ರವರೆಗೆ ವಿಸ್ತರಿಸಲಾಗಿದೆ.

ಪೋಷಕರು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ಅರ್ಜಿಯ ಅವಧಿಯನ್ನು ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳವಂತೆ ಕೋರಲಾಗಿದೆ.

ಬಿ.ಆರ್ಕ್, ಎಂ.ಸಿ.ಎ, ಎಂ.ಸಿ.ಎಚ್ (ವೈದ್ಯಕೀಯ), ಎಂ.ಡಿ, ಎಂ.ಎಸ್ (ಮಾಸ್ಟರ್ ಆಫ್ ಸರ್ಜರಿ), ಎಂ.ಎಸ್, ಎಂ.ಎಸ್ಸಿ (ಅಲೈಡ್ ಸೈನ್ಸಸ್), ಎಂಪಿಟಿ (ಫಿಸಿಯೋಥೆರಪಿ), ಎಂಎಚ್‌ಎ, ಮಾಸ್ಟರ್ ಆಫ್ ಪಬ್ಲಿಕ್ ಹೆಲ್ತ್, ಎಂಪಿಎಚ್ (ಅಲೈಡ್ ಸೈನ್ಸಸ್), ಎಂ.ಎಸ್ಸಿ. ನರ್ಸಿಂಗ್, ಎಂ.ಎಸ್ಸಿ, ಎಂ.ಟೆಕ್, ಎಂಬಿಎ, ಎಂಬಿಎ ಫಿನ್‌ಟೆಕ್, ಎಂಬಿಎ (ಲಾಜಿಸ್ಟಿಕ್ಸ್ ಮ್ಯಾನೇಜ್‌ಮೆಂಟ್), ಎಂಬಿಬಿಎಸ್, ಎಂಎಸ್ ಆಯುರ್ವೇದ, ಎಂಡಿ (ಆಯುರ್ವೇದ), ಎಂಡಿ (ಹೋಮ್), ಎಂಡಿಎಸ್, ಪಿಜಿ ಡಿಪ್ಲೊಮಾ ಇನ್ ಡೆಂಟಲ್, ಫಾರ್ಮ್.ಡಿ (ಪೋಸ್ಟ್ ಬ್ಯಾಕಲೌರಿಯೇಟ್), ಎಂ.ಫಾರ್ಮ್, ಬಿ.ಇ, ಬಿ.ಟೆಕ್, ಬಿ.ಎಸ್ಸಿ (ಆನರ್ಸ್), ಬಿ.ವಿ.ಎಸ್ಸಿ.&ಎ.ಎಚ್, ಬಿಎಎಂಎಸ್ (ಆಯುರ್ವೇದ), ಬಿಎಚ್‌ಎಂಎಸ್ (ಹೋಮಿಯೋಪತಿ), ಬಿಎನ್‌ವೈಎಸ್ (ಯೋಗ ಮತ್ತು ಪ್ರಕೃತಿ ಚಿಕಿತ್ಸೆ), ಬಿಯುಎಂಎಸ್ (ಯುನಾನಿ), ಬಿಎಎಂಎಸ್, ಬಿಡಿಎಸ್, ಎಂ.ಆರ್ಕ್, ಬಿ.ಎಫ್.ಎಸ್ಸಿ, ಬಿ.ಫಾರ್ಮ್, ಫಾರ್ಮ್. ಡಿ, ಬಿ.ಎಸ್ಸಿ (ಅಲೈಡ್ ಸೈನ್ಸಸ್), ಬಿಪಿಟಿ (ಫಿಸಿಯೋಥೆರಪಿ), ಬ್ಯಾಚುಲರ್ ಆಫ್ ಆಕ್ಯುಪೇಷನಲ್ ಥೆರಪಿ, ಬಿ.ಡೆಸ್, ಬಿ.ಎಸ್ಸಿ. (ನರ್ಸಿಂಗ್), ಬಿ.ಎಸ್ಸಿ. (ಪೋಸ್ಟ್ ಬೇಸಿಕ್), ಬಿ.ಎಡ್, ಬಿ.ಪ್ಲಾನ್, ಡಿಎಂ (ವೈದ್ಯಕೀಯ), ಎಂ.ಫಿಲ್, ಬಿ ಟೆಕ್ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ (ಪೂರ್ಣ ಸ್ಟ್ಯಾಕ್ ಡೆವಲಪ್ಮೆಂಟ್), ಬಿ ಟೆಕ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ (ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ), ಪ್ಯಾರಾಮೆಡಿಕಲ್ ಮತ್ತು ಎಲ್ಲಾ ಡಿಪ್ಲೊಮಾ ಕೋರ್ಸ್‌ಗಳ ವಿದ್ಯಾರ್ಥಿಗಳು ಮಾರ್ಚ್ 05ರೊಳಗಾಗಿ ವೆಬ್‌ಸೈಟ್ ವಿಳಾಸ: https://ssp.postmatric.karnataka.gov.in ನಲ್ಲಿ ಸಲ್ಲಿಸಬಹುದಾಗಿದೆ.

ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ವೆಬ್‌ಸೈಟ್ ವಿಳಾಸ: https://bcwd.karnataka.gov.in ಮಾಹಿತಿಗಾಗಿ ಭೇಟಿ ನೀಡಬಹುದಾಗಿದೆ. ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770004 ಅಥವಾ ಮೇಲ್: bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್: postmatrichelp@karnataka.gov.in ಅಥವಾ ಸಹಾಯಣಿ ಸಂಖ್ಯೆ: 1902ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.24ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ರಾಯಚೂರು ಫೆ,23–** ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಮಾರ್ಚ್ 1ರಂದು ರೇಣುಕಾಚಾರ್ಯ ಜಯಂತಿ ಹಾಗೂ ಮಾರ್ಚ್ 3ರಂದು ಯೋಗಿನಾರಾಯಣ ಯತೀಂದ್ರರ (ಕೈವಾರ ತಾತಯ್ಯ) ಜಯಂತಿ ನಡೆಯಲಿವೆ.

ಈ ಜಯಂತಿಗಳ ಅಂಗವಾಗಿ ಫೆ.24ರ ಬೆಳಿಗ್ಗೆ 11 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.24ರಂದು ಕ್ರೀಡಾ, ಸಾಂಸ್ಕೃತಿಕ ಉತ್ಸವ

**ರಾಯಚೂರು ಫೆ,23–** ಇಲ್ಲಿನ ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಯುವ ಸಂಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ಕ್ರೀಡಾ ಮತ್ತು ಸಾಂಸ್ಕೃತಿಕ ಉತ್ಸವ-2026ರ ಕಾರ್ಯಕ್ರಮವನ್ನು ಫೆ.24ರ ಬೆಳಿಗ್ಗೆ 8ಗಂಟೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಅವರು ಉದ್ಘಾಟನೆ ನೆರವೇರಿಸುವರು.

ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್‌ಅವರು ಘನ ಉಪಸ್ಥಿತಿ ವಹಿಸುವರು.

ಕೃಷಿ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ.ಹನುಮಂತಪ್ಪ ಅವರು ಉಪಸ್ಥಿತಿ ವಹಿಸುವರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

ಅತಿಥಿಗಳಾಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜಾರಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಲೆಕ್ಕಾಧಿಕಾರಿ ವಿಜಯಶಂಕರ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರಿ ಸೇರಿದಂತೆ ಇತರರು ಭಾಗಿಯಾಗಲಿದ್ದಾರೆ ಎಂದು ಜಿ.ಪಂ ಪ್ರಕಟಣೆಯಲ್ಲಿ ತಿಳಿಸಿದೆ.

# ಸಮಾಜ ಕಲ್ಯಾಣ ಇಲಾಖೆಯಿಂದ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಯಚೂರು ಫೆ,23–** ಸಮಾಜ ಕಲ್ಯಾಣ ಇಲಾಖೆಯಿಂದ ಡಾ.ಬಾಬು ಜಗಜೀವನ ರಾಂ ಅವರ 198ನೇ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಅಂಗವಾಗಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಜನಾಂಗದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ, ಶ್ರಮಿಸಿ, ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ 2026-27ನೇ ಸಾಲಿನ ಡಾ.ಬಾಬು ಜಗಜೀವನ ರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿಗಳನ್ನು ನೀಡಿ ಗೌರವಿಸಲು ಅರ್ಜಿ ಆಹ್ವಾನಿಸಲಾಗಿದೆ.

ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವರಾಂ ಇವರ ಸ್ಮರಣಾರ್ಥ ಪ್ರಶಸ್ತಿಗೆ ಯಾವುದೇ ವ್ಯಕ್ತಿ ಒಂದು ಪ್ರಶಸ್ತಿಗೆ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು. ಅರ್ಜಿದಾರರ ವಯಸ್ಸು ಕನಿಷ್ಠ 35 ವರ್ಷಗಳಾಗಿರತಕ್ಕದ್ದು. ಯಾವುದೇ ವ್ಯಕ್ತಿಯನ್ನು ಒಂದು ಪ್ರಶಸ್ತಿಗೆ ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರಶಸ್ತಿಗೆ ಯಾವುದೇ ಜನಾಂಗದ ವ್ಯಕ್ತಿ ಅರ್ಜಿ ಸಲ್ಲಿಸಬಹುದು. ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರಶಸ್ತಿಯನ್ನು ಗರಿಷ್ಠ 10 ಜನರಿಗೆ ಮತ್ತು ಡಾ.ಬಾಬು ಜಗಜೀವನರಾಂ ಪ್ರಶಸ್ತಿಯನ್ನು ಗರಿಷ್ಠ 10 ಜನರಿಗೆ ನೀಡಲಾಗುವುದು. ಅಂತಹ ಪ್ರಶಸ್ತಿಗಳನ್ನು ಕ್ರಮವಾಗಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನರಾಂ ಇವರ ಜನ್ಮ ದಿನಾಚರಣೆ ಸಮಾರಂಭದಲ್ಲಿ ಪ್ರಧಾನ ಮಾಡಲಾಗುವುದು. ಪ್ರಶಸ್ತಿಯು ಪ್ರಶಂಸಾ ಪತ್ರ, ಶಾಲು, ಗಂಧದಹಾರ, ಫಲಪುಷ್ಪ ಹಾಗೂ 25,000 ರೂ. ಮೊತ್ತದ ನಗದು ಒಳಗೊಂಡಿರುತ್ತದೆ. ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ವ್ಯಕ್ತಿಯು ಯಾವುದೇ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿರತಕ್ಕದ್ದಲ್ಲ. ಅರ್ಜಿಗಳನ್ನು ಸಂಬಂಧಪಟ್ಟ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಇವರಿಗೆ ಸಲ್ಲಿಸಬೇಕು. ಅಂತಹ ಅರ್ಜಿಗಳನ್ನು ಜಿಲ್ಲಾಧಿಕಾರಿಗಳು ಅವರ ಹಂತದಲ್ಲಿ ಪರಿಶೀಲಿಸಿ ಸೂಕ್ತ ವ್ಯಕ್ತಿಗಳನ್ನು ಗುರುತಿಸಿ ಜಿಲ್ಲೆಗೆ ಒಬ್ಬರಂತೆ (ಒಂದು ವೇಳೆ ಒಂದೇ ಜಿಲ್ಲೆಯಲ್ಲಿ ಒಂದಕ್ಕಿಂತ ಹೆಚ್ಚು ಅರ್ಹ ವ್ಯಕ್ತಿಗಳು ಇದ್ದಲ್ಲಿ ವಯಸ್ಸಿನ ಆಧಾರದ ಮೇಲೆ) ಶಿಫಾರಸ್ಸ ಮಾಡಿ ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರುರವರಲ್ಲಿ ಸಲ್ಲಿಸುವುದು. ರಾಜ್ಯ ಮಟ್ಟದಲ್ಲಿ ಸಾಮಾಜಿಕ ಸೇವೆ ಸಲ್ಲಿಸುತ್ತಿರುವ ಅರ್ಹ ವ್ಯಕ್ತಿಗಳು ನೇರವಾಗಿ ಅರ್ಜಿಗಳನ್ನು ಮಾನ್ಯ ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರುರವರಲ್ಲಿ ಸಲ್ಲಿಸಬಹುದು. ಜಿಲ್ಲಾಧಿಕಾರಿಗಳಿಂದ ಶಿಫಾರಸ್ಸಾದಂತಹ ಅರ್ಜಿಗಳು ಹಾಗೂ ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ಇವರಿಗೆ ನೇರವಾಗಿ ಸಲ್ಲಿಸಲ್ಪಟ್ಟ ಎಲ್ಲಾ ಅರ್ಜಿಗಳನ್ನು ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರುರವರು ಪರಿಶೀಲಿಸಿ ಪ್ರಶಸ್ತಿಗೆ ಅರ್ಹರೆಂದು ಕಂಡುಬರುವ ವ್ಯಕ್ತಿಗಳ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು.

ಆಸಕ್ತರು ಅರ್ಜಿ ನಮೂನೆಯನ್ನು ಉಪನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ರಾಯಚೂರು ಕಚೇರಿಯಲ್ಲಿ ಮತ್ತು ಅಯಾ ತಾಲೂಕಿನ ಸಹಾಯಕ ನಿರ್ದೇಶಕರು ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ ರಾಯಚೂರು, ಮಾನ್ವಿ, ಸಿಂಧನೂರು, ಲಿಂಗಸುಗೂರು ಮತ್ತು ದೇವದುರ್ಗ ಅವರ ಕಚೇರಿಗಳಲ್ಲಿ ಪಡೆದು ಮಾರ್ಚ್ 05ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉತ್ತಮ ಚಿಂತನೆ ಉನ್ನತ ಸಾಧನೆಗೆ ಪೂರಕ



**ಕಲಬುರಗಿ : ಫೆ.23:** ಸಕಾರಾತ್ಮಕ ಆಲೋಚನೆಗಳೊಂದಿಗೆ ಉತ್ತಮ ನಿರ್ಧಾರಗಳನ್ನು ಕೈಗೊಳ್ಳಬೇಕು. ಹೊಸ- ಹೊಸ ಯೋಚನೆಗಳಿಂದ ಯೋಜನೆಗಳನ್ನು ರೂಪಿಸಿಕೊಂಡರೆ ಮಾತ್ರ ಯಶಸ್ವಿಯಾಗಲು ಸಾಧ್ಯ. ಹೀಗಾಗಿ ಜೀವನದಲ್ಲಿ ಯಾವುದೇ ಸಂದರ್ಭದಲ್ಲಿಯಾದರೂ ಯೋಚಿಸಿ ನಿರ್ಧಾರ ತೆಗೆದುಕೊ ಳ್ಳುವುದು ಮುಖ್ಯವಾಗಿರುತ್ತದೆ. ಉತ್ತಮ ಚಿಂತನೆಯಿಂದ ವ್ಯಕ್ತಿತ್ವ ವಿಕಸನ ಸಾಧ್ಯವಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ ಹೇಳಿದರು. ನಗರದ ಆಳಂದ ರಸ್ತೆಯ ಶಿವ ನಗರದಲ್ಲಿರುವ 'ಶ್ರೀ ಮಲ್ಲಿನಾಥ ಮಹಾರಾಜ ಶಾಲೆ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ "ವಿಶ್ವ ಚಿಂತನೆ ದಿನಾಚರಣೆ"ಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಈ ದಿನವನ್ನು 'ಸ್ಕೌಟ್ ಮತ್ತು ಗೈಡ್ ದಿನ' ಎಂತಲೂ ಕರೆಯಲಾಗುತ್ತದೆ. ಈ ಸಂಸ್ಥೆಯ ಸ್ಥಾಪಕರಾದ ಲಾರ್ಡ್ ರಾಬರ್ಟ್ ಬೇಡನ್ ಪೊವೆಲ್ ಮತ್ತು ಲೇಡಿ ಓಲೇವ್ ಬೇಡನ್ ಪೊವೆಲ್ ಅವರ ಜನ್ಮದಿನದ ಸ್ಮರಣೆಗಾಗಿ ಆಚರಿಸಲಾಗುವುದು. ಮನುಷ್ಯನ ಜೀವನವು ಒಂದೇ ಕಡೆ ತಟಸ್ಥವಾಗಿರಬಾರದು, ಸದಾ ಹರಿಯುತ್ತಿರಬೇಕು. ಚಿಂತನೆಯ ಮಹತ್ವ ಸಾರಲು ಈ ದಿನವನ್ನು ಆಚರಿಸಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್. ಬಿರಾದಾರ, ಸಂಸ್ಥೆಯ ಅಧ್ಯಕ್ಷ ಅಮರ ಜಿ.ಬಂಗರಗಿ, ಶಾಲೆಯ ಮುಖ್ಯ ಶಿಕ್ಷಕಿ ಚಂಪಾಕಲಾ ನೆಲ್ಲೂರೆ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H